ಸಂಪುಟ 01 | ಸಂಚಿಕೆ 186 | ಭಾನುವಾರ 31 ಮೇ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ


1) ವಿಶ್ವ ತಂಬಾಕು ರಹಿತ ದಿನ

ವಿಶ್ವ ತಂಬಾಕು ರಹಿತ ದಿನವನ್ನು (Anti-Tobacco Day) ಪ್ರತಿ ವರ್ಷ ಮೇ 31 ರಂದು ಆಚರಿಸಲಾಗುತ್ತದೆ. ತಂಬಾಕು ಸೇವನೆಯಿಂದ ಉಂಟಾಗುವ ಮಾರಣಾಂತಿಕ ಕಾಯಿಲೆಗಳು ಮತ್ತು ಆರೋಗ್ಯದ ಮೇಲಿನ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸುವುದು ಈ ದಿನದ ಮುಖ್ಯ ಉದ್ದೇಶವಾಗಿದೆ.

## ಸುಭಾಷಿತ

ಶಾಸ್ತ್ರದಲ್ಲಿ ದೋಷವಿದ್ದರೆ ಹೃದಯದಲ್ಲಿ ತಿದ್ದಬಹುದು. ಹೃದಯದಲ್ಲಿ ದೋಷವಿದ್ದರೆ ಶಾಸ್ತ್ರ ಏನು ಮಾಡುವುದು

–ದ.ರಾ.ಬೇಂದ್ರೆ



ಕರ್ನಾಟಕ ಸರ್ಕಾರ

ರಾಜ್ಯಪಾಲರು, ಕರ್ನಾಟಕ

ಸಂಖ್ಯೆ: GS 57 GOB 2026 ದಿನಾಂಕ: 30-05-2026

ಮಾನ್ಯ ಶ್ರೀ ಡಿ. ಕೆ. ಶಿವಕುಮಾರ್ ಅವರೇ,

ಸರ್ಕಾರ ರಚಿಸಲು ಹಕ್ಕು ಮಂಡಿಸಿ ನೀವು ದಿನಾಂಕ 30 ಮೇ, 2026 ರಂದು ಬರೆದ ಪತ್ರವು ನನಗೆ ತಲುಪಿದೆ.

ಕರ್ನಾಟಕದ ಮುಖ್ಯಮಂತ್ರಿಯಾಗಿ ನಿಮ್ಮ ತಂಡದ ಸದಸ್ಯರೊಂದಿಗೆ ಪ್ರಮಾಣ ವಚನ ಸ್ವೀಕರಿಸಲು ನಾನು ನಿಮ್ಮನ್ನು ಆಹ್ವಾನಿಸುತ್ತೇನೆ. ಪ್ರಮಾಣ ವಚನ ಸ್ವೀಕಾರ ಸಮಾರಂಭವು 3ನೇ ಜೂನ್, 2026 ರಂದು ಮಧ್ಯಾಹ್ನ 04:05 ಗಂಟೆಗೆ ಲೋಕ ಭವನದ ಆವರಣದಲ್ಲಿ ನಡೆಯಲಿದೆ.

ವಂದನೆಗಳೊಂದಿಗೆ,
ತಮ್ಮ ವಿಶ್ವಾಸಿ,

(ಥಾವರಚಂದ್ ಗೆಹ್ಲೋಟ್)

ಶ್ರೀ ಡಿ. ಕೆ. ಶಿವಕುಮಾರ್,
ನಾಯಕರು, ಶಾಸಕಾಂಗ ಪಕ್ಷ,
ಭಾರತೀಯ ರಾಷ್ಟ್ರೀಯ ಕಾಂಗ್ರೆಸ್,
ಬೆಂಗಳೂರು.

ಪ್ರತಿಯನ್ನು ಇವರಿಗೆ ಕಳುಹಿಸಲಾಗಿದೆ:

ಶ್ರೀ ಡಿ. ಕೆ. ಶಿವಕುಮಾರ್,
ಅಧ್ಯಕ್ಷರು,
ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ,
ಬೆಂಗಳೂರು.

# ಮುಖ್ಯಮಂತ್ರಿ ಪದವಿಗಾಗಿ ಸಂಯಮ ಪಾಲಿಸಿದ ಡಿ.ಕೆ.ಶಿವಕುಮಾರ್ ಬಗ್ಗೆ ವ್ಯಾಪಕ ಶ್ಲಾಘನೆ

**ಅಧಿಕಾರ ಯಾರಿಗೂ ಶಾಶ್ವತವಲ್ಲ; ಆದರೂ ಅದರ ಬೆನ್ನತ್ತುವವರ ಸಂಖ್ಯೆ ಮಾತ್ರ ಕಡಿಮೆಯಿಲ್ಲ. ಕರ್ನಾಟಕದ ರಾಜಕೀಯ ಇತಿಹಾಸವನ್ನೊಮ್ಮೆ ಅವಲೋಕಿಸಿದರೆ, ಈ ಮಾತು ನಿಜವೆನಿಸಲಿದೆ. 2023ರ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಭೂತಪೂರ್ವ ಗೆಲುವು ಸಾಧಿಸಿ ಅಧಿಕಾರಕ್ಕೇರಿತು. ಮೂರು ವರ್ಷ ಆಡಳಿತವನ್ನೂ ಪೂರೈಸಿದೆ. ಕಾಂಗ್ರೆಸ್ ಪಕ್ಷದ ಸಂಪ್ರದಾಯದಂತೆ ಪ್ರದೇಶ ಕಾಂಗ್ರೆಸ್ ಅಧ್ಯಕ್ಷರಾದವರು ಮುಖ್ಯಮಂತ್ರಿಯಾಗಬೇಕಿತ್ತು. ಆದರೆ, ಆ ಸಂಪ್ರದಾಯವನ್ನು ಕಾಂಗ್ರೆಸ್ ಹೈಕಮಾಂಡ್ ಆಗ ಮುರಿಯಿತು.**

ಕೆಪಿಸಿಸಿ ಅಧ್ಯಕ್ಷರಾಗಿದ್ದ ಡಿ.ಕೆ.ಶಿವಕುಮಾರ್ ಅವರ ಬದಲಿಗೆ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಲು ಅವಕಾಶ ಮಾಡಿಕೊಟ್ಟಿತು. ಆಗ ಶಿವಕುಮಾರ್ ಅವರಿಗೆ ಮುಖ್ಯಮಂತ್ರಿ ಪಟ್ಟ ತಪ್ಪಿ ಉಪ ಮುಖ್ಯಮಂತ್ರಿ ಸ್ಥಾನಕ್ಕೆ ತೃಪ್ತಿ ಪಟ್ಟುಕೊಳ್ಳಬೇಕಾಯಿತು. ಎರಡೂವರೆ ವರ್ಷದ ನಂತರ ಮುಖ್ಯಮಂತ್ರಿ ಸ್ಥಾನವನ್ನು ಸಿದ್ದರಾಮಯ್ಯ ಅವರು ಶಿವಕುಮಾರ್ ಅವರಿಗೆ ಬಿಟ್ಟುಕೊಡುತ್ತಾರೆ ಎಂಬ ವಿಚಾರ ಅಧಿಕೃತವಾಗಿ ಬಹಿರಂಗಗೊಳ್ಳದಿದ್ದರೂ ರಾಜಕೀಯ ಪಡಸಾಲೆಯಲ್ಲಿ ವ್ಯಾಪಕವಾಗಿ ಚರ್ಚೆಯಾಯಿತು.

ಅಧಿಕಾರ ಹಸ್ತಾಂತರದ ವಿಚಾರ ಕಾಂಗ್ರೆಸ್ ಪಾಳಯದಲ್ಲಿ ಬಹು ಚರ್ಚೆಗೆ ಗ್ರಾಸವಾಯಿತು. ಅಷ್ಟಕ್ಕೇ ನಿಲ್ಲದೆ, ಸಿದ್ದರಾಮಯ್ಯ



ಬೆಂಬಲಿಗರು ಹಾದಿ ಬೀದಿಯಲ್ಲಿ ವಿಷಯ ಪ್ರಸ್ತಾಪಿಸಿ ಐದು ವರ್ಷ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಯಾಗಿರುತ್ತಾರೆ. ಒಂದು ವೇಳೆ ಬದಲಾವಣೆಯಾದರೆ ದಲಿತರಿಗೆ ಅವಕಾಶ ಮಾಡಿಕೊಡಬೇಕು ಎಂದು ಮಾಧ್ಯಮಗಳ ಮುಂದೆ ಹೇಳಿಕೆ ನೀಡಿದ್ದರು. ಇಂತಹ ಬೇಡಿಕೆಯನ್ನು ಹೈಕಮಾಂಡ್ ಮುಂದಿಟ್ಟಿದ್ದರು. ಮಾಜಿ ಸಚಿವರಾದ ಕೆ.ಎನ್.ರಾಜಣ್ಣ, ಜಮೀರ್ ಅಹದ್ ಖಾನ್ ಸೇರಿದಂತೆ ಹಲವರು ಶಿವಕುಮಾರ್ ಅವರನ್ನು ಪ್ರಚೋದಿಸುವಂತೆ ಆಗಾಗ್ಗೆ ವಿಷಯ ಪ್ರಸ್ತಾಪಿಸಿದರು. ಪ್ರತಿಯಾಗಿ ಶಿವಕುಮಾರ್ ಬೆಂಬಲಿಗ ಶಾಸಕರು ಮಾತನಾಡಿ ತಿರುಗೇಟು ಕೊಟ್ಟರು.

ಅದೀಗ ಇತಿಹಾಸ. ಕಳೆದ ಆರು ತಿಂಗಳಿನಿಂದಲೂ ಮುಖ್ಯಮಂತ್ರಿ ಬದಲಾವಣೆ ವಿಚಾರ ಕಾಂಗ್ರೆಸ್‌ನಲ್ಲಿ ಮುನ್ನೆಲೆಗೆ ಬಂದು ವಿರೋಧ ಪಕ್ಷಗಳಿಗೆ ಅಸ್ತ್ರವಾಗಿದ್ದೂ ಉಂಟು. ಮಾಜಿ ಸಂಸದ ಡಿ.ಕೆ.ಸುರೇಶ್ ಅವರು ಆಗೊಮ್ಮೆ ಈಗೊಮ್ಮೆ ಕೌಂಟರ್ ಕೊಡುವ ರೀತಿಯಲ್ಲಿ ಪರೋಕ್ಷ ಟೀಕೆ, ಟಿಪ್ಪಣಿ ಮಾಡತೊಡಗಿದ್ದರು. ಆದರೆ, ಶಿವಕುಮಾರ್ ಮಾತ್ರ ಹೈಕಮಾಂಡ್ ಭರವಸೆಯ ಮೇಲೆ ವಿಶ್ವಾಸವಿಟ್ಟು ತಾಳೆಯಿಂದ ವರ್ತಿಸಿದರು. ವಿಧಾನಸಭಾ ಚುನಾವಣಾ ಫಲಿತಾಂಶದ ನಂತರ ಸಹನೆಯ ಹಾದಿ ಅನುಸ–ರಿಸಿದರು. ಇದು ಅವರ ಇದುವರೆಗಿನ ಸ್ವಭಾವಕ್ಕೆ ತದ್ವಿರುದ್ಧವಾಗಿತ್ತು ಎಂದರೂ ತಪ್ಪಾಗಲಾರದು. ಡಿ.ಕೆ.ಶಿವಕುಮಾರ್ ಅನ್ಯಾಯವನ್ನು ಸಹಿಸಿ ಸುಮನೆ ಕೂರುವ ವ್ಯಕ್ತಿಯಲ್ಲ ಎಂಬುದು ಸಾರ್ವಜನಿಕವಾಗಿ ವ್ಯಕ್ತವಾಗುವ ಅಭಿಪ್ರಾಯ. ಮುಖ್ಯಮಂತ್ರಿ ಗಾದಿಗಾಗಿ ಬಹಿರಂಗ ಹೋರಾಟದ ಹಾದಿ ತುಳಿಯದೆ, ನಂಬಿದ ದೇವರಲ್ಲಿ ಮೊರೆ ಇಟ್ಟು ಹೈಕಮಾಂಡ್ ಭರವಸೆ ಮೇಲೆ ನಂಬಿಕೆಯಿಟ್ಟು ಉಪ ಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಸ್ಥಾನ ನಿರ್ವಹಿಸಿದರು. ಸಿದ್ದರಾಮಯ್ಯ ಅವರ ಬೆಂಬಲಿಗರು ಉಪಾಹಾರ ಕೂಟ, ಔತಣ ಕೂಟ, ಸಭೆಗಳನ್ನು ನಡೆಸಿ ಪ್ರಚೋದನೆ ಮಾಡುವ ರೀತಿ ನಡೆದುಕೊಂಡರೂ ಶಿವಕುಮಾರ್ ವಿಚಲಿತರಾಗಲಿಲ್ಲ. ತಲೆಯನ್ನೂ ಕೆಡಿಸಿಕೊಳ್ಳಲಿಲ್ಲ. ಅಧಿಕಾರ ಸಿಗುತ್ತದೋ ಇಲ್ಲವೋ ಎಂಬ ಆತಂಕ ಅವರ ಬೆಂಬಲಿಗರಲ್ಲಿತ್ತು.

ಆದರೆ, ಶಿವಕುಮಾರ್ ಪದೇ ಪದೇ ಹೇಳುತ್ತಿದ್ದ ಮಾತೆಂದರೆ, ಕಾಲವೇ ಉತ್ತರ ಕೊಡಲಿದೆ. ನಂಬಿದ ದೇವರು ಕೈ ಬಿಡುವುದಿಲ್ಲ. ಪ್ರಾರ್ಥನೆಗೆ ಫಲ ದೊರೆತೇ ದೊರೆಯುತ್ತದೆ ಎಂಬ ವಿಶ್ವಾಸದಲ್ಲೇ ಇದ್ದರು. ಒಂದು ಹಂತದಲ್ಲಿ ಅಧಿಕಾರ ಹಸ್ತಾಂತರದ ಹಗ್ಗ ಜಗ್ಗಾಟ ವಿಕೋಪಕ್ಕೆ ಹೋಗುವ ಲಕ್ಷಣ ಗೋಚರಿಸಿ ಶಿವಕುಮಾರ್ ಬೆಂಬಲಿಗರು ಮಾಡಿದ ಕೆಲಸಕ್ಕೆ ಕೂಲಿ ಕೊಡಬೇಕು ಎಂದೆಲ್ಲಾ ಹೇಳಿ ಹೈಕಮಾಂಡ್ ಮೇಲೆ ಒತ್ತಡ ತರುವ ಪ್ರಯತ್ನ ಮಾಡಿದರು. ಜೊತೆಗೆ ಮುಖ್ಯಮಂತ್ರಿಯಾಗುವವರ ಪಟ್ಟಿಯಲ್ಲಿ ಹಲವರ ಹೆಸರುಗಳು ಪ್ರಸ್ತಾಪವಾದವು. ಮಾಜಿ ಸಚಿವ ಡಾ. ಪರಮೇಶ್ವರ್ ಸೇರಿದಂತೆ ಹಲವರು ಮುಖ್ಯಮಂತ್ರಿ 3ನೇ ಪುಟಕ್ಕೆ

# ವಿದ್ಯಾರ್ಥಿಗಳಿಂದ ಬಸ್ ಪಾಸ್‌ಗಾಗಿ ಅರ್ಜಿ ಆಹ್ವಾನ

❑ ನೈಜ್ಯ ದೆಸೆ ನ್ಯೂಸ್

**ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ರಾಯಚೂರು ವಿಭಾಗದಿಂದ 2026–27 ನೇ ಸಾಲಿನ ವಿದ್ಯಾರ್ಥಿಗಳ ಪಾಸ್ ಪಡೆಯಲು ಆನ್ ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದೆ. ದಿನಾಂಕ 01.06.2026 ರಿಂದ ಆನ್ ಲೈನ್‌ನಲ್ಲಿ ವಿದ್ಯಾರ್ಥಿಗಳ ಸೇವಾ ಸಿಂಧು ಪೋರ್ಟಲ್ ಮುಖಾಂತರ ಅಥವಾ ಕರ್ನಾಟಕ ಒನ್ ಗ್ರಾಮ–ಒನ್ ಕೇಂದ್ರಗಳಲ್ಲಿ 35 ರೂ, ಸೇವಾ ಶುಲ್ಕ ಪಾವತಿಸಿ ಅರ್ಜಿ ಸಲ್ಲಿಸಬಹುದಾಗಿದೆ,**

URL: https: // sevasind-huservices. karnataka.gov.in/ bus-passservices/ ಅರ್ಜಿ ಸಲ್ಲಿಸಿದ ನಂತರ ವಿದ್ಯಾರ್ಥಿಗಳು ಆಯ್ಕೆ ಮಾಡಿದ ಕೌಂಟರ್‌ಗೆ ನಿಗದಿತ ಪಾಸಿನ ಶುಲ್ಕವನ್ನು ನಗದು ಅಥವಾ ಕ್ರೆಡಿಟ್ ಕಾರ್ಡ ಡೆಬಿಟ್ ಕಾರ್ಡ್ ಅಥವಾ ಯುಪಿಐ ಮೂಲಕ ಪಾವತಿಸಿ ಪಾಸ್ ಪಡೆಯಬಹುದು. ರಾಯಚೂರು, ಲಿಂಗಸೂಗೂರು, ಸಿಂಧನೂರು,ದೇವದುರ್ಗ, ಮಾನವಿ,ಮಸ್ಕಿ, ಸೇರಿದಂತೆ ತಲಾ ಒಂದು ವಿತರಣೆ ಕೇಂದ್ರಗಳಿವೆ, ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9620369539, 6364600850 ಸಂಪರ್ಕಿಸಬಹುದಾಗಿದೆ ಎಂದು ವಿಭಾಗೀಯ ನಿಯಂತ್ರಣಾಧಿಕಾರಿ ಕ.ಕ.ರ.ಸಾ.ನಿಗಮ ರಾಯಚೂರು ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# "ಜಲ ಜೀವನ ಮಿಷನ್ ಕಾಮಗಾರಿ ಸ್ವಗಿತ ಸಂಚಾರಕ್ಕೆ ತೊಂದರೆ"

❑ ನೈಜ್ಯ ದೆಸೆ ನ್ಯೂಸ್

**ಸಿರವಾರ: ಪಟ್ಟಣದ ರಾಜ್ಯ ಹೆದ್ದಾರಿಯ ರಾಯಚೂರು ಲಿಂಗಸಗೂರು ಮುಖ್ಯರಸ್ತೆಯಲ್ಲಿ ನಿತ್ಯ ಭಾರಿ ವಾಹನಗಳ ಓಡಾಟ ಹಾಗೂ ಸಂತೆ ಮಾರ್ಕೆಟ್ ರಸ್ತೆಯಲ್ಲಿ ಜಲ ಜೀವನ ಮಿಷನ್ ಬೃಹತ್ ಗಾತ್ರದ ಪೈಪ್ ಲೈನ್ ಕಾಮಗಾರಿ ಸ್ಥಗಿ–ತಗೊಂಡಿದ್ದರಿಂದ ಸಾರ್ವಜನಿಕರಿಗೆ ಹಾಗೂ ವಾಹನಗಳ ಓಡಾಟಕ್ಕೆ ತುಂಬಾ ತೊಂದರೆ ಉಂಟುಮಾಡಿದೆ.**

ರಸ್ತೆಯ ಪಕ್ಕದಲ್ಲಿ ಗುಂಡಿ ಅಗೆದು ಬಿಟ್ಟ ಕಾರಣ ಅಂಗಡಿಗಳ ವ್ಯಾಪಾರಿಗಳಿಗೆ ಮನೆಗಳ ನಿವಾಸಿಗಳಿಗೆ ತೊಂದರೆಯಾಗಿದೆ, ಮಳೆಯಿಂದ ನೀರು ನಿಂತು ಸೊಳ್ಳೆಗಳು ಉತ್ಪತ್ತಿಯಾಗಿ ಅನೇಕ ರೋಗಕ್ಕೆ ಕಾರಣವಾಗಿದೆ. ಸ್ಥಳೀಯ



ಪಟ್ಟಣ ಪಂಚಾಯತಿ ಆಡಳಿತ ಇದನ್ನು ಕಂಡೂ ಕಾಣದಂತೆ ಕುರುಡಾಗಿದೆ.

ಕಾಮಗಾರಿ ಗುತ್ತಿಗೆದಾರ–ರಿಗೆ ಅಥವಾ ಗ್ರಾಮೀಣ ಅಭಿವೃದ್ಧಿ ಮತ್ತು ಕುಡಿಯುವ ನೀರಿನ ಸರಬರಾಜು ಅಧಿಕಾರಿಗಳಿಗೆ ಒತ್ತಾಯ ಮಾಡಿ ಕಾಮಗಾರಿ ಸಂಪೂರ್ಣ ಮಾಡಿ ಜನರಿಗೆ ಓಡಾಟಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ಸ್ಥಳೀಯರು ಒತ್ತಾಯಿಸಿದರು.

# ರಾಯಚೂರು ಮಹಾನಗರ ಪಾಲಿಕೆಯ ವಾರ್ಡ್ ನಂ. 28 ಮತ್ತು 29ರಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಜನ ಪರದಾಟ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ನಗರ AIMIM ಪಕ್ಷದ ವತಿಯಿಂದ ರಾಯಚೂರು ಮಹಾನಗರ ಪಾಲಿಕೆಯ ವಾರ್ಡ್ ನಂ. 28 ಮತ್ತು 29 ಪ್ರದೇಶಗಳ ಜನಸಾಮಾನ್ಯರ ಮೂಲಭೂತ ಸೌಕರ್ಯಗಳ ಕುರಿತು ಮಾನ್ಯ ಮಹಾನಗರ ಪಾಲಿಕೆ ಆಯುಕ್ತರಿಗೆ ಮನವಿ ಪತ್ರ ಸಲ್ಲಿಸಲಾಯಿತು.**

ಈ ಸಂದರ್ಭದಲ್ಲಿ ಮಾತನಾಡಿದ ೦ಖಬಒಖಒ ನಗರ ಘಟಕದ ಅಧ್ಯಕ್ಷರಾದ ಶಬ್ಬೀರ್ ಅಹಮದ್ ಹೌದೊಡ್ಡಿ ಅವರು, ವಾರ್ಡ್ ವ್ಯಾಪ್ತಿಯ ಜನರು ಹಲವು ದಿನಗಳಿಂದ ಮೂಲಭೂತ ಸೌಕರ್ಯಗಳ ಕೊರತೆಯಿಂದ ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಹೇಳಿದರು.



ಸಾರ್ವಜನಿಕರಿಗೆ ಅಗತ್ಯವಾಗಿರುವ ಸ್ವಚ್ಛ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು, ಕೆಟ್ಟಿರುವ ಬೋರ್‌ವೆಲ್‌ಗಳನ್ನು ತಕ್ಷಣ ರಿಪೇರಿ ಮಾಡಿಸುವುದು, ಬೀದಿ ದೀಪಗಳನ್ನು ಅಳವಡಿಸುವುದು, ಕಾವಲಿಯ ಕಸುವನ್ನು ಸ್ಥಳಾಂತರಿಸುವುದು ಹಾಗೂ ಬೀದಿ ನಾಯಿಗಳ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸುವಂತೆ ಅವರು ಒತ್ತಾಯಿಸಿದರು. ಸ್ಥಳೀಯ ನಿವಾಸಿಗಳ ಸಮಸ್ಯೆಗಳನ್ನು ಶೀಘ್ರ ಪರಿಹರಿಸುವಂತೆ AIMIM ಮುಖಂಡರು ಹಾಗೂ ಕಾರ್ಯಕರ್ತರು ಮಹಾನಗರ ಪಾಲಿಕೆ ಅಧಿಕಾ–ರಿಗಳಿಗೆ ಮನವಿ ಮಾಡಿದ್ದಾರೆ.

ವರದಿ: ಖಾಜಾ ಹುಸೇನ್ ಬಾಬಾ ಜಾಲಹಳ್ಳಿ

# ತಾಯಿ ಮಗುವಿನ ಆರೈಕೆಗಾಗಿ ಆರೋಗ್ಯ ಇಲಾಖೆಯ ಯೋಜನೆಗಳ ಸದುಪಯೋಗ ಪಡೆದುಕೊಳ್ಳಿ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ತಾಲೂಕಿನ ಸಮೀಪದ ಜಂಗಮರಹಟ್ಟಿ ಗ್ರಾಮದಲ್ಲಿ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ ಇವರ ಸಂಯುಕ್ತ ಆಶ್ರಯದಲ್ಲಿ ನೆಡೆದ ಆರೋಗ್ಯ ಇಲಾಖೆಯ ಯೋಜನೆಗಳ ಕು–ರಿತು ಜನಜಾಗೃತಿ ಮೂಡಿಸುವ ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆಯ ಯೋಜನೆಗಳ ಪಡೆದುಕೊಳ್ಳುವಂತೆ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ ಮಾತನಾಡಿದರು.**

ಗರ್ಭಿಣಿಯ ಅವಧಿಯಲ್ಲಿ ತಾಯಿಯ ಆರೈಕೆ ಬಹಳ ಮಹತ್ವವಾಗಿದೆ ಆರೋಗ್ಯ ಇಲಾಖೆಯಲ್ಲಿ ಸಿಗುವ ಸೇವಾ ಸೌಲಭ್ಯಗಳನ್ನು



ಪ್ರತಿಯೊಬ್ಬ ತಾಯಂದಿರು ಆಶಾ ಕಾರ್ಯಕರ್ತರ ಜೊತೆಯಲ್ಲಿ ಪರೀಕ್ಷೆಗಾಗಿ ಆಸ್ಪತ್ರೆಗಳಿಗೆ ಭೇಟಿ ನೀಡಬೇಕು . ಕಬ್ಬಿಣಾಂಶ ಮಾತ್ರೆ ಕ್ಯಾಲ್ಸಿಯಂ ಮಾತ್ರೆ ಟಿಡಿ ಚುಚ್ಚುಮದ್ದನ್ನು ಪಡೆದುಕೊಳ್ಳಬೇಕು ಹಾಗೂ ಉತ್ತಮ ಪೌಷ್ಟಿಕ ಆಹಾರ ಸೇವನೆ ಮಾಡುವ ಮೂಲಕ ಸಹಜ. ಹೆರಿಗೆಯನ್ನು ಮಾಡಿಸಿಕೊಳ್ಳಬೇಕು.

ಹೆರಿಗೆ ನಂತರ ಮಕ್ಕಳಿಗೆ ಸಮಯಕ್ಕೆ ಸರಿಯಾಗಿ ಲಸಿಕೆಯನ್ನು ಹಾಕಿಸಬೇಕು ಹಾಗೂ ಬಾಣಂತಿಯ ಅವಧಿಯಲ್ಲಿ ತಾಯಿ ಉತ್ತಮ ಪೌಷ್ಟಿಕ ಆಹಾರ ಸೇವನೆ ಮಾಡಬೇಕು ಮಕ್ಕಳಿಗೆ ತಪ್ಪದೇ ಆರು ತಿಂಗಳ ಕಾಲ ಎದೆಯ ಹಾಲನ್ನು ಕೊಡಬೇಕು ನಂತರದ ದಿನಗಳಲ್ಲಿ ಲಘುವಾದ ಮತ್ತು ತೆಳುವಾದ ಪೌಷ್ಟಿಕ ಆಹಾರವನ್ನು ಕೊಡುವುದರ ಮೂಲಕ ತಾಯಿ ಮಕ್ಕಳ ಆರೋಗ್ಯವನ್ನು ಚೆನ್ನಾಗಿ ಕಾಪಾಡಿಕೊಳ್ಳಬೇಕು ಮನೆ ಮನೆಗೆ ತೆರಳಿ ಆರೋಗ್ಯ ಶಿಕ್ಷಣ ನೀಡಿ ಉತ್ತಮ ಆರೋಗ್ಯ ಕಾಪಾಡಿಕೊಳ್ಳಿ ಎಂದರು. ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ ಮಾತನಾಡಿ, ಮಳೆಗಾಲ ಪ್ರಾರಂಭವಾಗಿರುವುದ–ರಿಂದ ಸೊಳ್ಳೆಗಳ ಸಂಖ್ಯೆ ಹೆಚ್ಚಾಗಿ ಡೆಂಗ್ಯು, ಮಲೇರಿಯಾ ಮೆದುಳು ಜ್ವರ ಮುಂತಾದ ಸಾಂಕ್ರಾಮಿಕ ಕಾಯಿಲೆಗಳು ಹರಡುವ ಸಾಧ್ಯತೆ ಹೆಚ್ಚಿರುತ್ತದೆ. ಅದಕ್ಕಾಗಿ ಸಾರ್ವಜನಿಕರು ಸೊಳ್ಳೆ ನಿಯಂತ್ರಣಕ್ಕಾಗಿ ಮನೆ ಸುತ್ತಮುತ್ತ ಇರುವ ಪರಿಸರವನ್ನು ಸ್ವಚ್ಛವಾಗಿ ಇಟ್ಟುಕೊಳ್ಳಬೇಕು.

ಲಾರ್ವ ಉತ್ಪತ್ತಿಯಾಗದಂತೆ ನೋಡಿಕೊಂಡು ಸಾಂಕ್ರಾಮಿಕ ರೋಗಗಳು ಹರಡದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಹಾಗೂ ನೂರು ದಿನಗಳ ಕ್ಷಯಮುಕ್ತ ಅಭಿಯಾನ ಕಾರ್ಯಕ್ರಮ ನೆಡೆಯುತ್ತಿದ್ದು ಯಾರಿಗಾದರೂ ಎರಡು ವಾರದ ಕೆಮ್ಮು ಕೆಮ್ಮಿದಾಗ ಕಪ್ಪದಲ್ಲೇ ರಕ್ತ ಹಸಿವಾಗದೆ ಇರುವುದು ದೇಹದಲ್ಲಿ ತೂಕ ಕಡಿಮೆಯಾಗುವುದು ಕಂಡು ಬಂದರೆ ಕ್ಷಯರೋಗ ಇರಬಹುದು. ಕೂಡಲೇ ಹತ್ತಿರದ ಆಸ್ಪತ್ರೆಯಲ್ಲಿ ಕಫ್ ಪರೀಕ್ಷೆ ಮಾಡಿಸಿಕೊಂಡು ರೋಗ ಖಚಿತಪಟ್ಟರೆ ತಪ್ಪದೆ ಚಿಕಿತ್ಸೆಯನ್ನು ಪಡೆದುಕೊಂಡು ಆರೋಗ್ಯವಂತರಾಗಬೇಕು ಎಂದರು. ಈ ಸಂದರ್ಭದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ, ಆಶಾ ಕಾರ್ಯಕರ್ತೆ ಶರಣಮ್ಮ ಅಂಗನವಾಡಿ ಸಹಾಯಕಿ ಸುಜಾತಾ, ತಾಯಂದಿರು ಹಾಗೂ ಸಾರ್ವಜನಿಕರು ಹಾಜರಿದ್ದರು.

## ಸಾಹಿತ್ಯ ಸಿಂಚನ

ಒಳ್ಳೆಯ ಗುಣವು ಮನುಜನ ಆಭರಣ,
ಅದು ಜೀವನದ ಸತ್ಯದ ದಾರಿದೀಪ.
ಪ್ರೀತಿ, ದಯೆ, ವಿನಯವು ಅದರ ಶಕ್ತಿ,
ಸಮಾಜದ ಗೌರವವೇ ಅದರ ಸಂಪತ್ತು.

ಸತ್ಯದ ಹಾದಿಯಲ್ಲಿ ನಡೆಯುವವನು,
ಎಲ್ಲರ ಮನದಲ್ಲಿ ಸ್ಥಾನ ಪಡೆಯುವನು.
ಸಹಾಯ ಮಾಡುವ ಹೃದಯ ಹೊಂದಿದರೆ,
ಜೀವನದಲ್ಲಿ ಸಂತೋಷ ತುಂಬಿಕೊಳ್ಳುವನು.

ಮಾತಿನಲ್ಲಿ ಮಧುರತೆ, ನಡೆನಲ್ಲಿ ಶಿಷ್ಟತೆ,
ಇವೇ ಮನುಜನ ನಿಜವಾದ ಶ್ರೀಮಂತಿಕೆ.
ಒಳ್ಳೆಯ ಗುಣಗಳ ಬೆಳಕು ಹರಡಿದಾಗ,
ಜಗವೇ ಸುಂದರವಾಗಿ ಕಾಣುತ್ತದೆ.

ಒಳ್ಳೆಯ ಗುಣ ಬೆಳೆಸೋಣ ಎಲ್ಲರೂ,
ಮಾನವೀಯತೆಯ ಮೌಲ್ಯ ಉಳಿಸೋಣ.
ಪ್ರೀತಿ ಮತ್ತು ಕರುಣೆಯ ಬೀಜ ಬಿತ್ತೋಣ,
ಉತ್ತಮ ಸಮಾಜವನ್ನು ನಿರ್ಮಿಸೋಣ.

**ಜೀವನ್ ರಾಜ್**

## ಸ್ವತಂತ್ರನಗರ ಪರಿಶೀಲನೆ ನಡೆಸಿದ ಶಾಸಕ ಬೈರತಿ

**ನೈಜ್ಯ ದೆಸೆ ನ್ಯೂಸ್**

**ಕೆಆರ್‌ಪುರ: ಕಿತ್ತೋಗಿರೋ ಚರಂಡಿ ಸ್ಲಾಬ್ ಗಳನ್ನು ಈ ಕೂಡಲೇ ಸರಿಪಡಿಸಿ ಎಂದು ಶಾಸಕ ಬೈರತಿ ಬಸವರಾಜ ಅಧಿಕಾರಿಗಳಿಗೆ ಸೂಚಿಸಿದರು. ಸ್ವತಂತ್ರ ನಗರದಲ್ಲಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಚರಂಡಿಗಳು ಓಪನ್ ಆಗಿದ್ದರೆ ಮಳೆ ಬಂದಾಗ ಜನರು ಅದರಲ್ಲಿ ಬೀಳುವ ಅವಕಾಶ ಬಹಳಷ್ಟಿರುತ್ತದೆ ಆದ್ದರಿಂದ ಈ ಕೂಡಲೇ ಸರಿಪಡಿಸಿ ಎಂದು ಹೇಳಿದರು.**



ಕಾಂಕ್ರೀಟ್ ರಸ್ತೆಗಳ ಅವಶ್ಯಕತೆ ಕುರಿತು ಮನವಿ ಬಂದಿದ್ದು ಅನುದಾನ ಬಂದ ಕೂಡಲೇ ಸರಿಪಡಿಸುವುದಾಗಿ ಭರವಸೆ ನೀಡಿದರು. ಕೆರೆ ಅಂಗಳದಲ್ಲಿ ವ್ಯಾಯಾಮ ಮಾಡಲು ಇದ್ದ ಸಲಕರಣೆಗಳು ಹಾಳಾಗಿರುವುದನ್ನು ಗಮನಕ್ಕೆ ತಂದಿದ್ದು ಆದಷ್ಟು ಬೇಗ ಸರಪಡಿಸುವುದಾಗಿ ಹೇಳಿದರು. ಸ್ವಚ್ಛತೆ ಕಾಪಾಡುವುದು ಪ್ರತಿಯೊಬ್ಬರ ಕರ್ತವ್ಯ. ಇದನ್ನು ಜನರು ಅರಿತುಕೊಳ್ಳಬೇಕು. ರಸ್ತೆಯಲ್ಲಿ ಕಸ ಎಸೆದರೆ ವಾತಾವರಣ ಹಾಳಾಗುತ್ತದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಪಾಲಿಕೆ ಮಾಜಿ ಸದಸ್ಯ ಜಯಪ್ರಕಾಶ್, ಕ್ಷೇತ್ರ ಪ್ರಧಟನ ಕಾರ್ಯದರ್ಶಿ ಶ್ರೀರಾಮುಲು, ಯುವ ಮೋರ್ಚಾ ಅಧ್ಯಕ್ಷ ಪೀಟರ್, ಮೈಕಲ್ , ರಾಮು, ಲೋಕೇಶ್, ರಾಮಚಂದ್ರ, ರಘು, ಭಾಸ್ಕರ್ ಮತ್ತಿತರರಿದ್ದರು.

1ನೇ ಪುಟದಿಂದ....

ಯಾಗಲು ಸಮರ್ಥರಿರುವುದಾಗಿಯೂ ಹೇಳಿಕೆ ನೀಡಿದ್ದರು. ಇಷ್ಟೆಲ್ಲಾ ಬೆಳವಣಿಗೆಗಳು ಪಕ್ಷ ಹಾಗೂ ಸರ್ಕಾರದ ಹಂತದಲ್ಲಿ ನಡೆಯುತ್ತಿದ್ದರೂ ಶಿವಕುಮಾರ್ ಮಾತ್ರ ತಾಳೆ ಕಳೆದುಕೊಳ್ಳದೇ, ಕಂಡರೂ ಕಾಣದಂತೆ ಎಲ್ಲವನ್ನೂ ಸಹನೆಯಿಂದಲೇ ಗಮನಿಸುತ್ತಾ ಬಂದರು. ತಮ ನಿಶ್ಚಿತ ಗುರಿ ತಲುಪಲು ಮಾಡಬೇಕಾದ ಪ್ರಯತ್ನಗಳನ್ನು ತೆರೆಮರೆಯಲ್ಲಿ ಕಾಲಕಾಲಕ್ಕೆ ಮಾಡುತ್ತಾ ಬಂದರು. ಮುಖ್ಯಮಂತ್ರಿ ಸ್ಥಾನದ ಬದಲಾವಣೆಯ ನಿರ್ಣಾಯಕ ಹಂತದಲ್ಲೂ ಮೌನವಾಗಿದ್ದು, ಹೆಚ್ಚು ಮಾತನಾಡದೇ ಕಾರ್ಯ ಸಾಧ್ಯ ಮಾಡಿಕೊಂಡರು. ಮುಖ್ಯಮಂತ್ರಿಯ ಪದವಿಗಾಗಿ ಹೋರಾಟದ ಹಾದಿಯ ಬದಲಿಗೆ ಸಹನೆ ಹಾಗೂ ಸಂಯಮದಿಂದ ವರ್ತಿಸಿ ಸಿದ್ಧಿಸಿಕೊಂಡರು. ಶಿವಕುಮಾರ್ ಅವರ ಈ ನಡೆ ಅವರನ್ನು ಹತ್ತಿರದಿಂದ ಬಲ್ಲವರಿಗೆ ಹಾಗೂ ರಾಜಕಾರಣಿಗಳಿಗೆ ಅದರಲ್ಲೂ ರಾಜಕೀಯ ಚಿಂತಕರಿಗೆ ನಂಬಲು ಸಾಧ್ಯವಾಗದಂತಹ ಪರಿಸ್ಥಿತಿ ಸೃಷ್ಟಿಸಿತ್ತು. ಆದರೂ ತಮ ಮುಂಗೋಪದ ಸ್ವಭಾವಕ್ಕೆ ವಿರುದ್ಧವಾದ ಮಾರ್ಗದಲ್ಲಿ ನಡೆದು ತಮ ವಿಶ್ವಾಸವನ್ನು ಇನ್ನಷ್ಟು ಹೆಚ್ಚಿಸಿಕೊಂಡರು. ಅನಿವಾರ್ಯವಾಗಿ ಹೈಕಮಾಂಡ್ ಶಿವಕುಮಾರ್ ಅವರಿಗೆ ನೀಡಿದ ಭರವಸೆಯಂತೆ ಮುಖ್ಯಮಂತ್ರಿ ಪದವಿಗೆ ಅವಕಾಶ ಮಾಡಿಕೊಡಬೇಕಾಯಿತು. ಅಧಿಕಾರ ಹಂಚಿಕೆಯ ಇಡೀ ಪ್ರಹಸನದಲ್ಲಿ ಶಿವಕುಮಾರ್ ಅವರ ತಾಳೆ, ಸಹನೆ, ಸಂಯಮ, ದೇವರ ಪ್ರಾರ್ಥನೆ ಜಯ ತಂದುಕೊಟ್ಟಿದೆ ಎಂಬ ಮೆಚ್ಚುಗೆಯ ಮಾತುಗಳು ಸಾರ್ವಜನಿಕವಾಗಿ ಹಾಗೂ ರಾಜಕೀಯವಾಗಿ ಕೇಳಿಬರುತ್ತಿವೆ.

# ಮಹಿಳೆಯರ ಮುಟ್ಟು ಶಾಪವಲ್ಲ ಪ್ರಕೃತಿ ನೀಡಿದ ವರದಾನ: ಶರಣಮ್ಮ ಕಾರನೂರು

**ನೈಜ್ಯ ದೆಸೆ ನ್ಯೂಸ್**

**ರಾಯಚೂರು: ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಹಿಳಾ ಸಬಲೀಕರಣ ಘಟಕ ಹಾಗೂ ನವೋದಯ ಶಿಕ್ಷಣ ಮಹಾವಿದ್ಯಾಲಯ ರಾಯಚೂರು ಇವರ ಸಹಯೋಗದಲ್ಲಿ ದಿನಾಂಕ 29.05.2026 ರಂದು ನವೋದಯ ಶಿಕ್ಷಣ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ "ಮೇ-28 ಮುಟ್ಟಿನ ನೈರ್ಮಲ್ಯ ದಿನ" ಜಾಗೃತಿ ಕಾರ್ಯಕ್ರಮ ಕುರಿತು ಮುಟ್ಟು ಮಹಿಳೆಯರಿಗೆ ಪ್ರಕೃತಿ ನೀಡಿದ ವರದಾನ ವೈಜ್ಞಾನಿಕ ಮನೋಭಾವದಿಂದ ಎಲ್ಲರೂ ಈ ವಿಷಯವನ್ನು ಅರ್ಥಮಾಡಿಕೊಳ್ಳಬೇಕು ಎಂದರು ಮಕ್ಕಳಿಗೆ ಈ ಕುರಿತು ಮಾರ್ಗದರ್ಶನವನ್ನು ನೀಡಬೇಕು.**

ಯಾವುದೇ ರೀತಿಯ ಮೂಢನಂಬಿಕೆಗೆ ಒಳಗಾಗಬಾರದೆಂದು ಕಾರ್ಯಕ್ರಮ ಉದ್ಘಾಟಿಸಿ ಶರಣಮ್ಮ ಕಾರನೂರು ಉಪನಿರ್ದೇಶಕರು ಮಹಿಳಾ ಮತ್ತ ಮಕ್ಕಳ ಅಭಿವೃದ್ಧಿಇಲಾಖೆ ರಾಯಚೂರು ಇವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ವಿಶ್ವ ಮುಟ್ಟಿನ ನೈರ್ಮಲ್ಯ ದಿನಾಚರಣೆಯನ್ನು ಪ್ರತಿ ವರ್ಷ ಮೇ 28 ರಂದು ಆಚರಿಸಲಾಗುತ್ತಿದ್ದು, ಈ ಕುರಿತು ಎಲ್ಲರಲ್ಲೂ ಜಾಗೃತಿ ಅತ್ಯವಶ್ಯ. ಮುಟ್ಟಿನ ಸಮಯದಲ್ಲಿ ಪ್ರಕೃತಿಗೆ ಹಾನಿಯಾಗುವಂತಹ ಹಾಗೂ ನಮ್ಮ ದೇಹಕ್ಕೆ ಹಾನಿಕಾರಕವಾಗುವಂತಹ ಪ್ಯಾಡಗಳನ್ನು ಬಳಸಬಾರದು ಯಾವುದೇ ಸಮಸ್ಯೆ ಕಂಡುಬಂದಲ್ಲಿ ವೈದ್ಯರನ್ನು ಸಂಪರ್ಕಿಸಿ menstrual cup ನ್ನು ಬಳಸಬೇಕೆಂದು.

ಡಾ.ನಂದಿತಾ ಎಂ.ಎನ್ಜಿಲ್ಲಾಆರ್.ಸಿ. ಹೆಚ್.ಅಧಿಕಾರಿಗಳು "ಮೇ-28 ಮುಟ್ಟಿನ ನೈರ್ಮಲ್ಯ ದಿನ" ಜಾಗೃತಿ ಕಾರ್ಯಕ್ರಮ ಕುರಿತು ಉಪನ್ಯಾಸ ಭಾಷಣ ಮಾಡಿದರು. ಮುಟ್ಟಿನ ಶುಭ್ರ ದಿನವನ್ನಾಗಿ ಆಚರಿಸಲಾಗುತ್ತಿದೆ ಪ್ರಕೃತಿ ನೀಡಿದ ಈ ದೈಹಿಕ ಬದಲಾವಣೆಯನ್ನು ನಾವೆಲ್ಲರೂ ಗೌರದಿಂದ ಕಾಣಬೇಕಾಗಿದೆ ಎಂದರು.ಹದಿಹರೆಯದ ಮಕ್ಕಳಲ್ಲಿ ಈ ಕುರಿತು ಜಾಗೃತಿ ಅತ್ಯವಶ್ಯಕ ಆದ್ದರಿಂದ ಪ್ರಶಿಕ್ಷಣಾರ್ಥಿಗಳಾದ ತಾವುಗಳು ಈ ಕುರಿತುಅಧ್ಯನಯ ಮಾಡಿ ಮಕ್ಕಳಿಗೆ ಈ ವಿಷಯದ ಕುರಿತು ಪಾಠಮಾಡಿ ಎಂದು ತಿಳಿಸಿದರು.

ನಿಯಮಿತವಾದ ಪೌಷ್ಟಿಕ ಆಹಾರ ಸೇವನೆ, ವ್ಯಾಯಾಮ ಶುವಿತ್ವವಾದ ಶೌಚಾಲಯಗಳ ಬಳಕೆ ಅತ್ಯವಶ್ಯಕ ಎಂದರು. ಮಹಿಳೆಯರು ಮುಟ್ಟಿನಿಂದಾಗುವ ತೊಂದರೆಗಳ ಕುರಿತು ಮುಕ್ತವಾಗಿ ಮಾತನಾಡುವುದನ್ನು ಕಲಿಯಬೇಕು ಅವಶ್ಯವಿದ್ದಲ್ಲಿ ವೈದ್ಯರನ್ನು ಸಂಪರ್ಕಮಾಡಬೇಕು ಎಂದು ಡಾ: ಶ್ರೀ ಮತಿ ಗಿರಿಜಾ ಜಂಡರ್ ತಜ್ಞರು ಸಲಹೆ ನೀಡಿದರು. ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹಾಗೂ ಪುರುಷ ಉಪನ್ಯಾಸಕರು ಭಾಗವಹಿಸಿ ಈ ಕುರಿತು ಚರ್ಚಿಸಿದ್ದು ವಿಶೇಷವಾಗಿತ್ತು.

ಈ ಸಂದರ್ಭದಲ್ಲಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲರಾದ ಡಾ.ಉಮಾಕಾಂತಜಿ. ದೇವರಮನಿ,ವಹಿಸಿದ್ದರು. ಡಾ.ರಾಜಾಶಂಕರಎನ್. ಆಡಳಿತ ಸಂಯೋಜಕರು, ಡಾ.ರತನ್ ಚವ್ಹಾನ್ ಶೈಕ್ಷಣಿಕ ಸಂಯೋಜಕರು, ಡಾ.ವಿಜಯಕುಮಾರಿ ಅಧ್ಯಕ್ಷರು, ಆಂತರಿಕ ದೂರು ಸಮಿತಿ, ಹಾಗೂ ನವೋದಯಶಿಕ್ಷಣ ಮಹಾವಿದ್ಯಾಲಯದ ಉಪನ್ಯಾಸಕರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬಕಲ್ಯಾಣ ಇಲಾಖೆ ಆರ್..ಕೆ.ಎಸ್.ಕೆ ಜಿಲ್ಲಾ ಸಂಯೋಜಕರು, ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ಶ್ರೀಮತಿವಿಜಯಲಕ್ಷ್ಮಿ ನವೂದಯ ಶಿಕ್ಷಣ ಮಹಾವಿದ್ಯಾಲಯದ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

# ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾಗಿ ಸತ್ಯನಾರಾಯಣ ಶೆಟ್ಟಿ ನೇಮಕ

**ನೈಜ್ಯ ದೆಸೆ ನ್ಯೂಸ್**

**ಬೆಂಗಳೂರು: ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಅಧಿನಿಯಮ, 2005ರ ಪ್ರಾವಧಾನಗಳ ಅನ್ವಯ ಹಾಗೂ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ನಿಯಮಗಳು, 2010ರ ನಿಯಮ 3 ಮತ್ತು ಕರ್ನಾಟಕ ನಿಯಮಗಳು, 2025ರ ತಿದ್ದುಪಡಿ ನಿಯಮಗಳ ಮೂಲಕ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸತ್ಯನಾರಾಯಣ ಶೆಟ್ಟಿ (ಸಿಂಧನೂರು, ರಾಯಚೂರು ಜಿಲ್ಲೆ), ಜಗನ್ನಾಥ ಹಲಮಡಗಿ (ಹುಮನಾಬಾದ್, ಬೀದರ್ ಜಿಲ್ಲೆ)**




**ಹಾಗೂ ವೆಂಕಟೇಶ್ (ಮಂಡ್ಯ ಜಿಲ್ಲೆ) ಅವರನ್ನು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರನ್ನಾಗಿ ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಮೂರು ವರ್ಷಗಳ ಅವಧಿಗೆ ನೇಮಕ ಮಾಡಿ ಆದೇಶಿಸಲಾಗಿದೆ.**

ಈ ಕುರಿತು ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಹಾಗೂ ಅವರ ಹೆಸರಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ?3 ಗಂಗಾದೇವಿ ಹೆಚ್.ಸಿ. ಆದೇಶ ಹೊರಡಿಸಿದ್ದಾರೆ. ಮಕ್ಕಳ ಹಕ್ಕುಗಳ ಸಂರಕ್ಷಣೆ, ಕಲ್ಯಾಣ, ಶಿಕ್ಷಣ, ಸುರಕ್ಷತೆ ಹಾಗೂ ಸಮಗ್ರ ಅಭಿವೃದ್ಧಿಗಾಗಿ ನೂತನ ಸದಸ್ಯರು ತಮ್ಮ ಅನುಭವ ಮತ್ತು ಸೇವಾ ಮನೋಭಾವದ ಮೂಲಕ ಮಹತ್ವದ ಕೊಡುಗೆ ನೀಡಲಿದ್ದಾರೆ ಎಂಬ ವಿಶ್ವಾಸ ವ್ಯಕ್ತವಾಗಿದೆ.

ಅವರು ತಮ್ಮ ಮೂರು ವರ್ಷಗಳ ಅಧಿಕಾರಾವಧಿಯಲ್ಲಿ ಮಕ್ಕಳ ಹಿತಾಸಕ್ತಿಯನ್ನು ಕಾಪಾಡುವ ನಿಟ್ಟಿನಲ್ಲಿ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಿ, ರಾಜ್ಯದ ಮಕ್ಕಳಿಗೆ ನ್ಯಾಯ, ರಕ್ಷಣೆ ಹಾಗೂ ಸಬಲೀಕರಣ ಒದಗಿಸುವಲ್ಲಿ ಪ್ರಮುಖ ಪಾತ್ರ ವಹಿಸಲಿದ್ದಾರೆ ಎಂದು ಆಶಿಸಲಾಗಿದೆ. ನೂತನವಾಗಿ ನೇಮಕಗೊಂಡ ಸದಸ್ಯರಿಗೆ ವಿವಿಧ ವಲಯಗಳಿಂದ ಅಭಿನಂದನೆಗಳ ಮಹಾಪೂರ ಹರಿದು ಬಂದಿದೆ.

# ನಿವೃತ್ತಗೊಂಡ ಹಿನ್ನೆಲೆಯಲ್ಲಿ ಕೆ ಸಿ ಮಹೇಶ್ ರವರಿಗೆ ಸನ್ಮಾನ.

**ನೈಜ್ಯ ದೆಸೆ ನ್ಯೂಸ್**

**ಕರಲಕಟ್ಟೆ ಗ್ರಾಮದಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಕೆ. ಸಿ. ಮಹೇಶ್ ಅವರು ನಿವೃತ್ತಗೊಂಡ ಹಿನ್ನೆಲೆಯಲ್ಲಿ ಗ್ರಾಮಸ್ಥರು, ಸ್ನೇಹಿತರು, ಹಾಗೂ ಸಹವರ್ತಿಗಳು, ಕುಟುಂಬದವರು ಅವರಿಗೆ ಸನ್ಮಾನಿಸಿ ಅಭಿನಂದಿಸಿದರು.**



ಸನ್ಮಾನ ಸ್ವೀಕರಿಸಿದ ಅವರು ಮಾತನಾಡುತ್ತಾ, ಸರ್ಕಾರಿ ಕೆಲಸ ಎಂದ ಮೇಲೆ ವರ್ಗಾವಣೆ ಆಗುವುದು ನಿವೃತ್ತಿ ಆಗುವುದು ಸರ್ವೇಸಾಮಾನ್ಯವಾಗಿದೆ. ಇಂದು ನಾನು ನಿವೃತ್ತಿಗೊಂಡಿದ್ದೇನೆ, ಆದುದರಿಂದ ನನಗೆ ಸನ್ಮಾನಿಸಿದ ಎಲ್ಲರಿಗೂ ನಾನು ಆಭಾರಿಯಾಗಿದ್ದೇನೆ. ಇಲ್ಲಿನ ಗ್ರಾಮಸ್ಥರು ನಿಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಿ ,ಸರ್ಕಾರಿ ಶಾಲೆಗಳನ್ನು ಉಳಿಸಿ ಬೆಳೆಸಲು ಸಹಕಾರಿಯಾಗಿ ಎಂದರು. ನಮ್ಮ ಶಾಲೆಯಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ಈಗ ಉನ್ನತ ಹುದ್ದೆಯಲ್ಲಿರುವುದು ನನಗೆ ಸಂತಸ ತಂದಿದೆ.

ನನ್ನ ಸೇವೆಗೆ ಗ್ರಾಮಸ್ಥರು ಹಾಗೂ ಎಲ್ಲರೂ ಸಹಕಾರ ನೀಡಿದ್ದಾರೆ. ಅವರಿಗೆ ನಾನು ಕೃತಜ್ಞತೆ ಸಲ್ಲಿಸುತ್ತಿದ್ದೇನೆ ಎಂದರು. ಈ ಸಂದರ್ಭದಲ್ಲಿ ಸಿದ್ದಯ್ಯ ಮಾತನಾಡಿ, ನಿವೃತ್ತಗೊಂಡ ನಮ್ಮ ಸ್ನೇಹಿತರಾದ ಮಹೇಶ್ ರವರ ಮುಂದಿನ ಜೀವನ ಸುಖಕರವಾಗಿರಲಿ ಅವರು ಎಲ್ಲರೊಡನೆ ಸ್ನೇಹಜೀವಿಯಾಗಿ ವರ್ತಿಸಿ ಎಲ್ಲರ ಪ್ರೀತಿಗೆ ಪಾತ್ರರಾಗಿದ್ದರು ಎಂದರು. ಈ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿದ್ದ ವಿದ್ಯಾರ್ಥಿಗಳಿಗೆ ನಿವೃತ್ತ ಶಿಕ್ಷಕ ಕೆ ಸಿ ಮಹೇಶ್ ರವರ ಅಕ್ಕನ ಮಕ್ಕಳಾದ ಪುನೀತ್ ಮತ್ತು ವಿನಯ್ ಜಾಮಿಟ್ರಿ ಬಾಕ್ಸ್, ನೋಟ್ ಪುಸ್ತಕ, ಪೆನ್ನು ವಿತರಿಸಿದರು.

ಈ ಕಾರ್ಯಕ್ರಮದಲ್ಲಿ ಮಾಲಿನಿ ಮಹೇಶ್, ನಿವೃತ್ತ ಶಿಕ್ಷಕರಗಳಾದ ಬೋರೇಗೌಡ, ಕೃಷ್ಣೆಗೌಡ, ಸುಂದರಪ್ಪ ಮತ್ತು ಜಿ.ಎಸ್. ಕೃಷ್ಣ, ಬಸವರಾಜು, ಕುಟುಂಬದವರಾದ ಗಂಗಾಧರ ಸ್ವಾಮಿ,

# "ಪಟ್ಟಣ ಸುತ್ತಮುತ್ತ ಕೃಷಿ ಚಟುವಟಿಕೆ ಚುರುಕು" ಕವಿತಾಳ ಸಮೀಪದ ಪಟಕನದೊಡ್ಡಿ ಬಳಿ ರೈತರು ಬಿತ್ತನೆಯಲ್ಲಿ ತೊಡಗಿರುವುದು.

**ನೈಜ್ಯ ದೆಸೆ ನ್ಯೂಸ್**

**ಕವಿತಾಳ: ಪಟ್ಟಣ ಸೇರಿದಂತೆ ಸುತ್ತಲಿನ ಪ್ರದೇಶದಲ್ಲಿ ಈಚೆಗೆ ಮುಂಗಾರು ಪೂರ್ವ ಮಳೆ ಸುರಿದ ಹಿನ್ನೆಲೆಯಲ್ಲಿ ಭೂಮಿ ಹದವಾಗಿದ್ದು, ಬಿತ್ತನೆ ಕಾರ್ಯ ಚುರುಕು ಪಡೆದಿದೆ. ಬೇಸಿಗೆಯಲ್ಲಿ ಭೂಮಿಯಲ್ಲಿನ ಕಳೆ, ಕಸ, ಕಡ್ಡಿ ತೆಗೆದು ಹಸನುಗೊಳಿಸಿದ್ದ ರೈತರು ಮುಂಗಾರು ಮಳೆಯ ನಿರೀಕ್ಷೆಯಲ್ಲಿದ್ದರು. ಈಚೆಗೆ ಸುರಿದ ಧಾರಾಕಾರ ಮಳೆಗೆ ಭೂಮಿ ಹದವಾಗಿದ್ದು, ಕೃಷಿ ಚಟುವಟಿಕೆಗಳು ಗರಿಗೆದರಿವೆ.**

ಕೊಳವೆಬಾವಿ ಆಧಾರಿತ ಜಮೀನುಗಳಲ್ಲಿ ರೈತರು ಈಗಾಗಲೇ



ಹತ್ತಿ ಬಿತ್ತನೆ ಮಾಡಿದ್ದಾರೆ. ಈಗ ಉತ್ತಮ ಮಳೆ ಸುರಿದ ಹಿನ್ನೆಲೆಯಲ್ಲಿ ಹತ್ತಿ ಮತ್ತು ತೊಗರಿ ಬಿತ್ತನೆಗೆ ರೈತರು ಮುಂದಾಗಿದ್ದಾರೆ. ಕೃಷಿ ಇಲಾಖೆ ಪ್ರಕಾರ ಹೋಬಳಿ ವ್ಯಾಪ್ತಿಯ ಅಂದಾಜು 15,440 ಹೆಕ್ಟೇರ್ ಕೃಷಿ ಭೂಮಿಯಲ್ಲಿ ತೊಗರಿ 4,900 ಹೆಕ್ಟೇರ್, ಹತ್ತಿ 6 ಸಾವಿರ ಹೆಕ್ಟೇರ್ ಸೇರಿದಂತೆ ಸಜ್ಜೆ, ಹೆಸರು, ಸೂರ್ಯಕಾಂತಿ ಹಾಗೂ ಮತ್ತಿತರ ಬೆಳೆ ಬೆಳೆಯುವ ಗುರಿ ಹೊಂದಲಾಗಿದೆ. ಕಳೆದ ಸಾಲಿನಲ್ಲಿ ತೊಗರಿ 6,500 ಹೆಕ್ಟೇರ್, ಹತ್ತಿ 3 ಸಾವಿರ ಹೆಕ್ಟೇರ್ ಬಿತ್ತನೆ ಮಾಡಲಾಗಿತ್ತು. ಬೆಂಬಲ ಬೆಲೆ ಹೆಚ್ಚಿದ ಪರಿಣಾಮ ಈ ವರ್ಷ ಹೆಚ್ಚಿನ ಪ್ರಮಾಣದಲ್ಲಿ ಹತ್ತಿ ಮತ್ತು ತೊಗರಿ ಬಿತ್ತನೆಗೆ ರೈತರು ಆಸಕ್ತಿ ತೋರುತ್ತಿದ್ದಾರೆ ಎನ್ನಲಾಗಿದೆ.

# ಆರೋಗ್ಯ ಇಲಾಖೆಯ ಯೋಜನೆಗಳ ಸದುಪಯೋಗ ಪಡೆದುಕೊಳ್ಳಿ :ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳು ಈಶ್ವರ ದಾಸಪ್ಪನವರ

**ನೈಜ್ಯ ದೆಸೆ ನ್ಯೂಸ್**

**ಸಿಂಧನೂರು: ತಾಲೂಕಿನ ಸಮೀಪದ ಜಂಗಮರಹಟ್ಟಿ ಗ್ರಾಮದಲ್ಲಿ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ ಇವರ ಸಂಯುಕ್ತ ಆಶ್ರಯದಲ್ಲಿ ನೆಡೆದ ಆರೋಗ್ಯ ಇಲಾಖೆಯ ಯೋಜನೆಗಳ ಕುರಿತು ಜನಜಾಗೃತಿ ಮೂಡಿಸುವ ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆಯ ಯೋಜನೆಗಳ ಪಡೆದುಕೊಳ್ಳುವಂತೆ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ್ ಮಾತನಾಡಿದರು.**

ಗರ್ಭಿಣಿಯ ಅವಧಿಯಲ್ಲಿ ತಾಯಿಯ ಆರೈಕೆ ಬಹಳ ಮಹತ್ವವಾಗಿದೆ ಆರೋಗ್ಯ ಇಲಾಖೆಯಲ್ಲಿ ಸಿಗುವ ಸೇವಾ ಸೌಲಭ್ಯಗಳನ್ನು ಪ್ರತಿಯೊಬ್ಬ ತಾಯಂದಿರು ಆಶಾ ಕಾರ್ಯಕರ್ತರ




ಜೊತೆಯಲ್ಲಿ ಪರೀಕ್ಷೆಗಾಗಿ ಆಸ್ಪತ್ರೆಗಳಿಗೆ ಭೇಟಿ ನೀಡಬೇಕು . ಕಬ್ಬಿಣಾಂಶ ಮಾತ್ರೆ ಕ್ಯಾಲ್ಸಿಯಂ ಮಾತ್ರೆ ಟಿಡಿ ಚುಚ್ಚುಮದ್ದನ್ನು ಪಡೆದುಕೊಳ್ಳಬೇಕು ಹಾಗೂ ಉತ್ತಮ ಪೌಷ್ಟಿಕ ಆಹಾರ ಸೇವನೆ ಮಾಡುವ ಮೂಲಕ ಸಹಜ. ಹೆರಿಗೆಯನ್ನು ಮಾಡಿಸಿಕೊಳ್ಳಬೇಕು.

ಹೆರಿಗೆ ನಂತರ ಮಕ್ಕಳಿಗೆ ಸಮಯಕ್ಕೆ ಸರಿಯಾಗಿ ಲಸಿಕೆಯನ್ನು ಹಾಕಿಸಬೇಕು ಹಾಗೂ ಬಾಣಂತಿಯ ಅವಧಿಯಲ್ಲಿ ತಾಯಿ ಉತ್ತಮ ಪೌಷ್ಟಿಕ ಆಹಾರ ಸೇವನೆ ಮಾಡಬೇಕು ಮಕ್ಕಳಿಗೆ ತಪ್ಪದೇ ಆರು ತಿಂಗಳ ಕಾಲ ಎದೆಯ ಹಾಲನ್ನು ಕೊಡಬೇಕು ನಂತರದ ದಿನಗಳಲ್ಲಿ ಲಘುವಾದ ಮತ್ತು ತೆಳುವಾದ ಪೌಷ್ಟಿಕ ಆಹಾರವನ್ನು ಕೊಡುವುದರ ಮೂಲಕ ತಾಯಿ ಮಕ್ಕಳ ಆರೋಗ್ಯವನ್ನು ಚೆನ್ನಾಗಿ ಕಾಪಾಡಿಕೊಳ್ಳಬೇಕು ಮನೆ ಮನೆಗೆ ತೆರಳಿ ಆರೋಗ್ಯ ಶಿಕ್ಷಣ ನೀಡಿ ಉತ್ತಮ ಆರೋಗ್ಯ ಕಾಪಾಡಿಕೊಳ್ಳಿ ಎಂದರು. ನಂತರ ಮಾತನಾಡಿದ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ ಅವರು ಮಳೆಗಾಲ ಪ್ರಾರಂಭವಾಗಿರುವುದರಿಂದ ಸೊಳ್ಳೆಗಳ ಸಂಖ್ಯೆ ಹೆಚ್ಚಾಗಿ ಡೆಂಗ್ಯೂ ಮಲೇರಿಯಾ ಮೆದುಳು ಜ್ವರ ಮುಂತಾದ ಸಾಂಕ್ರಾಮಿಕ ಕಾಯಿಲೆಗಳು ಹರಡುವ ಸಾಧ್ಯತೆ ಹೆಚ್ಚಿರುತ್ತದೆ.

ಅದಕ್ಕಾಗಿ ಸಾರ್ವಜನಿಕರು ಸೊಳ್ಳೆ ನಿಯಂತ್ರಣಕ್ಕಾಗಿ ಮನೆ ಸುತ್ತಮುತ್ತ ಇರುವ ಪರಿಸರವನ್ನು ಸ್ವಚ್ಛವಾಗಿ ಇಟ್ಟುಕೊಳ್ಳಬೇಕು ಲಾರ್ವ ಉತ್ಪತ್ತಿಯಾಗದಂತೆ ನೋಡಿಕೊಂಡು ಸಾಂಕ್ರಾಮಿಕ ರೋಗಗಳು ಹರಡದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಹಾಗೂ ಸದ್ಯ ನೂರು ದಿನಗಳ ಕ್ಷಯಮುಕ್ತ ಅಭಿಯಾನ ಕಾರ್ಯಕ್ರಮ ನೆಡೆಯುತ್ತಿದ್ದು ಯಾರಿಗಾದರೂ ಎರಡು ವಾರದ ಕೆಮ್ಮು ಕೆಮ್ಮಿದಾಗ ಕಪ್ಪದಲ್ಲೇ ರಕ್ತ ಹಸಿವಾಗದೆ ಇರುವುದು ದೇಹದಲ್ಲಿ ತೂಕ ಕಡಿಮೆಯಾಗುವುದು ಕಂಡು ಬಂದರೆ ಕ್ಷಯರೋಗ ಇರಬಹುದು.

ಕೂಡಲೇ ಹತ್ತಿರದ ಆಸ್ಪತ್ರೆಯಲ್ಲಿ ಕಫ್ ಪರೀಕ್ಷೆ ಮಾಡಿಸಿಕೊಂಡು ರೋಗ ಖಚಿತಪಟ್ಟರೆ ತಪ್ಪದೆ ಚಿಕಿತ್ಸೆಯನ್ನು ಪಡೆದುಕೊಂಡು ಆರೋಗ್ಯವಂತರಾಗಬೇಕು ಎಂದರು. ಈ ಸಂದರ್ಭದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಆಶಾ ಕಾರ್ಯಕರ್ತೆ ಶರಣಮ್ಮ ಅಂಗನವಾಡಿ ಸಹಾಯಕಿ ಸುಜಾತ ತಾಯಂದಿರು ಹಾಗೂ. ಸಾರ್ವಜನಿಕರು ಹಾಜರಿದ್ದರು

# ನೇಮಕಾತಿ ಪ್ರಕಟಣೆ

KMF GUMUL ನೇಮಕಾತಿ 2026–55 ಡೈರಿ ಮೇಲ್ವಿಚಾರಕರು, ಸಹಾಯಕ ವ್ಯವಸ್ಥಾಪಕ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಮೇ 30, 2026 KMF GUMUL ನೇಮಕಾತಿ 2026: 55 ಡೈರಿ ಮೇಲ್ವಿಚಾರಕರು, ಸಹಾಯಕ ವ್ಯವಸ್ಥಾಪಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕಲಬುರಗಿ–ಬೀದರ್ ಮತ್ತು ಯಾದಗಿರಿ ಸಹಕಾರಿ ಹಾಲು ಉತ್ಪಾದಕರ ಒಕ್ಕೂಟ ಲಿಮಿಟೆಡ್, ಡೈರಿ ಮೇಲ್ವಿಚಾರಕರು, ಸಹಾಯಕ ವ್ಯವಸ್ಥಾಪಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ KMF GUMUL ಅಧಿಕೃತ ಅಧಿಸೂಚನೆ ಮೇ 2026 ರ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಕಲಬುರಗಿ ಕರ್ನಾಟಕ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 27–ಜೂನ್–2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು.ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 29–05–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 27–ಜೂನ್–2026 ಅರ್ಜಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ: 27–06–2026 ಅಧಿಕೃತ ವೆಬ್‌ಸೈಟ್: kmfnandini.coop

# ಯಾದಗಿರಿ ಜಿಲ್ಲೆ ಅಭಿಷಾಳ ಗ್ರಾಮದ ಮೊಹಮ್ಮದ್ ಸಮೀ ಅವರಿಗೆ ಬೆಂಗಳೂರು ಕ್ರೈಸ್ಟ್ ವಿಶ್ವವಿದ್ಯಾಲಯದಿಂದ ಪ್ರಥಮ ದರ್ಜೆಯಲ್ಲಿ ವಕೀಲ ಪದವಿ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ನಗರದ ಪ್ರತಿಷ್ಠಿತ ಕ್ರೈಸ್ಟ್ (ಪರಿಗಣಿತ ವಿಶ್ವವಿದ್ಯಾಲಯ) ವಿಶ್ವವಿದ್ಯಾಲಯದ 2026ನೇ ಸಾಲಿನ ಘಟಿಕೋತ್ಸವವು ಅತ್ಯಂತ ವೈಭವದಿಂದ ನಡೆಯಿತು. ಈ ಸಂದರ್ಭದಲ್ಲಿ ಯಾದಗಿರಿ ಜಿಲ್ಲೆಯ ವಡಗೇರಾ ತಾಲೂಕಿನ ಅಭಿಷಾಳ ಗ್ರಾಮದ ದಿವಂಗತ ಚಾಂದ್ ಪಟೇಲ್ ಅವರ ಮೊಮ್ಮಗನಾದ ಪ್ರತಿಭಾವಂತ ವಿದ್ಯಾರ್ಥಿ ಮೊಹಮ್ಮದ್ ಸಮೀ ಅವರು ಪ್ರಥ–'ಮ ದರ್ಜೆಯಲ್ಲಿ ವಕೀಲ ಪದವಿ ಪಡೆದು ಗ್ರಾಮ ಹಾಗೂ ಕುಟುಂಬದ ಕೀರ್ತಿಯನ್ನು ಹೆಚ್ಚಿಸಿದರು.**

ಮೊಹಮ್ಮದ್ ಸಮೀ ಅವರ ತಂದೆಯಾದ ಮೊಹಮ್ಮದ್ ಮುಸ್ತಫಾ ಅವರು ಮೂಲತಃ ಕೃಷಿಕ ಕುಟುಂಬದವರಾಗಿದ್ದು, ಹಲವು ವರ್ಷಗಳಿಂದ ಬೆಂಗಳೂರಿನ ಪ್ರತಿಷ್ಠಿತ ಇಟಭಛಿಥಿ ಕಂಪನಿಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ.






ಘಟಿಕೋತ್ಸವ ಸಮಾರಂಭದಲ್ಲಿ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಫಾದರ್ ಜೋಸ್ ಸಿ. ಸಿ. ಅವರು ಪದವಿ ಪ್ರದಾನ ಮಾಡಿ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು. ಇದೇ ವೇಳೆ ಮಾತನಾಡಿದ ಅವರು, "ಪದವಿ ಎಂಬುದು ಕೇವಲ ಪ್ರಮಾಣಪತ್ರವಲ್ಲ; ಅದು ವಿದ್ಯಾರ್ಥಿಗಳ ಕಠಿಣ ಪರಿಶ್ರಮ, ಸಮರ್ಪಣಾ ಭಾವ ಮತ್ತು ಅಚಲ ನಿರ್ಧಾರದ ಪ್ರತೀಕವಾಗಿದೆ" ಎಂದು ಅಭಿಪ್ರಾಯಪಟ್ಟರು.

"ನೀವು ಇನ್ನು ಮುಂದೆ ಜಾಗತಿಕ ಮಟ್ಟದಲ್ಲಿ ಕ್ರೈಸ್ಟ್ ವಿಶ್ವವಿದ್ಯಾಲಯದ ರಾಯಭಾ–ರಿಗಳಾಗಿದ್ದೀರಿ. ಇಲ್ಲಿ ಕಲಿತ ಮೌಲ್ಯಗಳು, ಸಂಸ್ಕಾರಗಳು ಹಾಗೂ ದೃಷ್ಟಿಕೋನಗಳು ನಿಮ್ಮ ಭವಿಷ್ಯದ ಜೀವನಕ್ಕೆ ಮಾರ್ಗದರ್ಶಿಯಾಗಲಿ" ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಅವರು ಮೌಲ್ಯಾಧಾರಿತ ಜೀವನಕ್ಕೆ ಒತ್ತು ನೀಡಿ, ಕೇವಲ ಸುಲಭದ ಹಾದಿಯನ್ನು ಹಿಡಿಯದೇ ಪ್ರಾಮಾಣಿಕತೆ, ಪರಿಶ್ರಮ ಹಾಗೂ ಸತತ ಪ್ರಯತ್ನದ ಮೂಲಕ ಸಮಾಜದಲ್ಲಿ ನೈಜ ಸಾಧನೆ ಮಾಡಬೇಕೆಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ವಿದ್ಯಾರ್ಥಿಗಳ ಯಶಸ್ಸಿನ ಹಿಂದೆ ಪೋಷಕರು, ಪ್ರಾಧ್ಯಾಪಕರು ಹಾಗೂ ಮಾರ್ಗದರ್ಶಕರ ಬೆಂಬಲ ಮಹತ್ವದ್ದಾಗಿದೆ ಎಂಬುದನ್ನೂ ಸ್ಮರಿಸಿದರು. ವಿಶ್ವವಿದ್ಯಾಲಯದ ಧ್ಯೇಯವಾಕ್ಯವಾದ "ಉತ್ಕೃಷ್ಟತೆ ಮತ್ತು ಸೇವೆ" (Excellence and Service) ಯನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜದ ಪ್ರಗತಿ ಹಾಗೂ ದೇಶದ ಅಭಿವೃದ್ಧಿಗೆ ಧನಾತ್ಮಕ ಕೊಡುಗೆ ನೀಡುವಂತೆ ವಿದ್ಯಾರ್ಥಿಗಳಿಗೆ ಹಾರೈಸಲಾಯಿತು. ಈ ಸಂದರ್ಭದಲ್ಲಿ ವಿವಿಧ ವಿಭಾಗಗಳ ಪದವೀಧರರು, ಪೋಷಕರು ಹಾಗೂ ಅಧ್ಯಾಪಕ ವೃಂದದವರು ಉಪಸ್ಥಿತರಿದ್ದರು. ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಗ್ರಾಮದ ಸಂಬಂಧಿಕರಾದ ಬಾಬಾ ಮೆಡಿಕಲ್ ಪಾರಿವಾರದ ವತಿಯಿಂದ ಮೊಹಮ್ಮದ್ ಸಮೀ ಅವರಿಗೆ ಶುಭಾಶಯಗಳನ್ನು ಕೋರಲಾಯಿತು. ಯಾದಗಿರಿ ಜಿಲ್ಲೆಯ ಸಾರ್ವಜನಿಕರು ಹಾಗೂ ಅಭಿಷಾಳ ಗ್ರಾಮದ ಗ್ರಾಮಸ್ಥರು ಸಹ ಅಭಿನಂದನೆಗಳನ್ನು ಸಲ್ಲಿಸಿದರು. ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

## 4.24 ಕೋಟಿ ರೂ. ಗೋಲ್‌ಮಾಲ್: ತಾಪಂ ಇಒ ಅಮಾನತು

ನೈಜ್ಯ ದೆಸೆ ನ್ಯೂಸ್

**ಚಿತ್ರದುರ್ಗ: ತುಮಕೂರು ಜಿಲ್ಲೆಯ ಮಧುಗಿರಿ ತಾಲೂಕು ಪಂಚಾಯಿತಿಯಲ್ಲಿ ನಡೆದಿರುವ ಬರೋಬ್ಬರಿ 4.24 ಕೋಟಿ ರೂ.ಗಳ 'ಅಂತಿಮ ಗಳಿಕೆ ರಜೆ ನಗದೀಕರಣ' ಹಗರಣ–ಕ್ಕೆ ಸಂಬಂಧಿಸಿದಂತೆ, ಪ್ರಸ್ತುತ ಚಳ್ಳಕೆರೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಯಾಗಿ (EM) ಕರ್ತವ್ಯ ನಿರ್ವಹಿಸುತ್ತಿರುವ ಶಶಿಧರ್. ಹೆಚ್ ಅವರನ್ನು ರಾಜ್ಯ ಸರ್ಕಾರ ಸೇವೆಯಿಂದ ಅಮಾನತುಗೊಳಿಸಿ ಆದೇಶ ಹೊರಡಿಸಿದೆ.**



ಶಶಿಧರ್. ಹೆಚ್ ಅವರು ಈ ಹಿಂದೆ ಮಧುಗಿರಿ ತಾ.ಪಂ.ನಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ನಿವೃತ್ತಿ ಹೊಂದಿದ, ಸ್ವಯಂ ನಿವೃತ್ತಿ ಪಡೆದ ಹಾಗೂ ಮರಣ ಹೊಂದಿದ ಸರ್ಕಾರಿ ನೌಕರರ ಹೆಸರಿನಲ್ಲಿ ಅಂತಿಮ ಗಳಿಕೆ ರಜೆ ನಗದೀಕರಣ ಮಂಜೂರಾತಿ ಮಾಡುವಲ್ಲಿ ಈ ಭಾರಿ ಅಕ್ರಮ ನಡೆದಿದೆ. ವಿಶೇಷ ಲೆಕ್ಕ ಪರಿಶೋಧನಾ ತಂಡ ಹಾಗೂ ರಾಜ್ಯ ಮಟ್ಟದ ತನಿಖಾ ತಂಡವು ತನಿಖೆ ನಡೆಸಿದಾಗ ಈ ಬೆಚ್ಚಿಬೀಳಿಸುವ ಸತ್ಯ ಬಯಲಾಗಿದೆ. ಖಜಾನೆ–2ರ ತಂತ್ರಾಂಶದಲ್ಲಿ ನೌಕರರ 'ರೆಸಿಪಿಯಂಟ್ ಐಡಿ' ಯಲ್ಲಿದ್ದ ನೌಕರರ ಹೆಸ–ರಿಗೂ ಮತ್ತು ವಾಸ್ತವವಾಗಿ ಹಣ ವರ್ಗಾವಣೆಯಾಗಿರುವ ಬ್ಯಾಂಕ್ ಖಾತೆದಾರರ ಹೆಸರಿಗೂ ಭಾರಿ ವ್ಯತ್ಯಾಸವಿರುವುದು ಪತ್ತೆಯಾಗಿದೆ. ಈ ಐಡಿಗಳನ್ನು ದುರ್ಬಳಕೆ ಮಾಡಿಕೊಂಡು ಬೇರೆ ಬೇರೆ ಬ್ಯಾಂಕ್ ಖಾತೆಗಳಿಗೆ ಹಲವು ಬಾರಿ ಅಕ್ರಮವಾಗಿ ಒಟ್ಟು 4,24,06,997 ರೂ. (ರೂ. 4.24 ಕೋಟಿ) ಹಣವನ್ನು ವರ್ಗಾಯಿಸಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟುಮಾಡಲಾಗಿದೆ. ಸರ್ಕಾರದ ತಾಜಾ ಆದೇಶದ ಪ್ರಕಾರ, ಶಶಿಧರ್. ಹೆಚ್ ಅವರ ಅಧಿಕಾರಾವಧಿಯಲ್ಲಿ 147 ಪ್ರಕರಣಗಳಲ್ಲಿ ಒಟ್ಟು 82,77,533 ರೂ. ಗಳ ಹಣವನ್ನು ಪಾವತಿಸಲಾಗಿದ್ದು, ಬ್ಯಾಂಕ್ ಖಾತೆಗಳಲ್ಲಿನ ಫಲಾನುಭವಿಗಳ ಹೆಸರು ತಾಳೆಯಾಗದೇ ಇರುವುದು ತನಿಖೆ ವೇಳೆ ಕಂಡುಬಂದಿದೆ. ಈ ಬಗ್ಗೆ ಪರಿಶೀಲನೆಗೆ ಯಾವುದೇ ದಾಖಲೆಗಳನ್ನು ಒದಗಿಸದೇ ಕರ್ತವ್ಯ ಲೋಪವೆಸಗಿರುವುದು ಹಾಗೂ ಸರ್ಕಾರದ ಅನುದಾನವನ್ನು ದುರುಪಯೋಗಪಡಿಸಿಕೊಂಡು ಆರ್ಥಿಕ ನಷ್ಟ ಉಂಟುಮಾಡಿರುವುದು ಮೇಲ್ನೋಟಕ್ಕೆ ಸಾಬೀತಾಗಿದೆ. ಈ ಗಂಭೀರ ಕರ್ತವ್ಯಲೋಪ ಹಾಗೂ ಆರ್ಥಿಕ ಅವ್ಯವಹಾರದ ಹಿನ್ನೆಲೆಯಲ್ಲಿ, ಮೇ 27, 2026 ರಂದು ಹೊರಡಿಸಲಾದ ಸರ್ಕಾರದ ಆದೇಶದನ್ವಯ ಕಠಿಣ ಕ್ರಮ ಕೈಗೊಳ್ಳಲಾಗಿದೆ. ಶಶಿಧರ್. ಹೆಚ್ ಅವರ ವಿರುದ್ಧ ಇಲಾಖಾ ವಿಚಾರಣೆಯನ್ನು ಬಾಕಿ ಇರಿಸಿ, ಕರ್ನಾಟಕ ನಾಗರಿಕ ಸೇವಾ ಅಡಿ ತಕ್ಷಣದಿಂದ ಜಾರಿಗೆ ಬರುವಂತೆ ಸರ್ಕಾರಿ ಸೇವೆಯಿಂದ ಅಮಾನತುಗೊಳಿಸಲಾಗಿದೆ.

# ಅಲ್ಪಸಂಖ್ಯಾತರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡದಿದ್ದರೆ ಕಾಂಗ್ರೆಸ್‌ಗೆ ರಾಜಕೀಯ ಹಿನ್ನಡೆ!" ಮುಜಾಹಿದ್ ಮರ್ಚೆಡ್

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಕರ್ನಾಟಕದ ಮುಸ್ಲಿಂ ಸಮುದಾಯವು ದಶಕಗಳಿಂದಲೂ ರಾಜ್ಯದ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ಪ್ರಗತಿಗೆ ಮಹತ್ವದ ಕೊಡುಗೆ ನೀಡುತ್ತ ಬಂದಿದೆ. ಆದರೆ ಇಂದಿನ ರಾಜಕೀಯ ವ್ಯವಸ್ಥೆಯಲ್ಲಿ ಸಮುದಾಯಕ್ಕೆ ತಕ್ಕ ಮಟ್ಟಿನ ಪ್ರಾತಿನಿಧ್ಯ ಸಿಗುತ್ತಿಲ್ಲ ಎಂಬ ಅಸಮಾಧಾನ ಹೆಚ್ಚುತ್ತಿದೆ ಎಂದು ರಾಯಚೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅಲ್ಪಸಂಖ್ಯಾತರ ವಿಭಾಗದ ಜಿಲ್ಲಾ ಕಾರ್ಯದರ್ಶಿ ಮುಜಾಹಿದ್ ಮರ್ಚೆಡ್ ತಿಳಿಸಿದ್ದಾರೆ.**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದ ಸರ್ಕಾರವು ಹಲವು ಜನಪರ ಯೋಜನೆಗಳನ್ನು ಜಾರಿಗೆ ತಂದಿದ್ದರೂ, ಅಲ್ಪಸಂಖ್ಯಾತ ಸಮುದಾಯಕ್ಕೆ ರಾಜಕೀಯವಾಗಿ ಗೌರವಯುತ ಸ್ಥಾನಮಾನ ನೀಡುವಲ್ಲಿ ಇನ್ನಷ್ಟು ಧೈರ್ಯಶಾಲಿ ನಿರ್ಧಾರಗಳ ಅಗತ್ಯವಿದೆ ಎಂದು ಮುಜಾಹಿದ್ ಮರ್ಚೆಡ್ ಅಭಿಪ್ರಾಯಪಟ್ಟಿದ್ದಾರೆ. ರಾಜಕೀಯ ಬೆಳವಣಿಗೆಗಳ ಹಿನ್ನೆಲೆದಲ್ಲಿ, ಡಿ.ಕೆ.ಶಿವಕುಮಾರ ಅವರು ಮುಖ್ಯಮಂತ್ರಿಯಾಗಿ ಪದಗ್ರಹಣ ಮಾಡುವ ಸಂದರ್ಭ, ಖಾಲಿಯಾಗಲಿರುವ ಉಪ ಮುಖ್ಯಮಂತ್ರಿ ಸ್ಥಾನವನ್ನು ಅಲ್ಪಸಂಖ್ಯಾತ–ರಿಗೆ ಸಾಮಾಜಿಕ ನ್ಯಾಯದಡಿ



ನೀಡಬೇಕು ಎಂದು ಮುಜಾಹಿದ್ ಮರ್ಚೆಡ್ ಸ್ಪಷ್ಟವಾಗಿ ಒತ್ತಾಯಿಸಿದ್ದಾರೆ.

ಈ ಹಿನ್ನೆಲೆಯಲ್ಲಿ, ಹಿರಿಯ ನಾಯಕ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅಥವಾ ಯು.ಟಿ.ಖಾದರ್ ಇವರಲ್ಲಿ ಒಬ್ಬರನ್ನು ಉಪ ಮುಖ್ಯಮಂತ್ರಿಯನ್ನಾಗಿ ನೇಮಕ ಮಾಡುವುದು ಸಮಂಜಸ ಹಾಗೂ ನ್ಯಾಯಸಮ್ಮತ ಕ್ರಮವಾಗುತ್ತದೆ ಎಂದು ತಿಳಿಸಿದ್ದಾರೆ. ಮುಸ್ಲಿಂ ಸಮುದಾಯವು ಕಾಂಗ್ರೆಸ್ ಪಕ್ಷದ ಬಲಿಷ್ಠ ಬೆಂಬಲಿಗವಾಗಿದ್ದು, ಚುನಾವಣಾ ಸಂದರ್ಭಗಳಲ್ಲಿ ತನ್ನ ಸಂಖ್ಯಾಬಲವನ್ನು ನಿರಂತರವಾಗಿ ಪ್ರದರ್ಶಿಸಿದೆ. ಈ ನಿಷ್ಠೆಯನ್ನು ಗೌರವಿಸುವ ನಿಟ್ಟಿನಲ್ಲಿ ಉಪ ಮುಖ್ಯಮಂತ್ರಿ ಸ್ಥಾನವನ್ನು ನೀಡುವುದು ರಾಜ–ಕೀಯವಾಗಿ ಸಹ ಅಗತ್ಯವಾಗಿದೆ. 2028ರ ವಿಧಾನಸಭಾ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು, ಅಲ್ಪಸಂಖ್ಯಾತರಿಗೆ ಸೂಕ್ತ ಪ್ರಾತಿನಿಧ್ಯ ನೀಡದಿದ್ದರೆ ಅದರ ರಾಜ–ಕೀಯ ಪರಿಣಾಮಗಳನ್ನು ಎದುರಿಸಬೇಕಾಗಬಹುದು ಎಂದು ಮುಜಾಹಿದ್ ಮರ್ಚೆಡ್ ಎಚ್ಚರಿಸಿದ್ದಾರೆ.

ಸಮುದಾಯದ ವಿಶ್ವಾಸವನ್ನು ಗಟ್ಟಿಗೊಳಿಸಲು ಈ ನಿರ್ಧಾರ ಅತ್ಯಂತ ಮುಖ್ಯವಾಗಿದೆ. ಇದಲ್ಲದೆ, ರಾಯಚೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅಲ್ಪಸಂಖ್ಯಾತರ ವಿಭಾಗವು ವಿವಿಧ ಮುಸ್ಲಿಂ ಸಂಘಟನೆಗಳು, ಧಾರ್ಮಿಕ ಮುಖಂಡರು ಹಾಗೂ ಯುವಕರೊಂದಿಗೆ ಚರ್ಚೆ ನಡೆಸಿದ್ದು, ಈ ಬೇಡಿಕೆಯನ್ನು ತೀವ್ರವಾಗಿ ಮುಂದುವರಿದಿದೆ. ಸರ್ಕಾರವು ಈ ಬೇಡಿಕೆಯನ್ನು ಗಂಭೀರವಾಗಿ ಪರಿಗಣಿಸದಿದ್ದಲ್ಲಿ, ಮುಸ್ಲಿಂ ಸಂಘಟನೆಗಳು ಶಾಂತಿಯುತ ಪ್ರತಿಭಟನೆಗಳು, ಮೆರವಣಿಗೆಗಳು ಹಾಗೂ ಜನಜಾಗೃತಿ ಕಾರ್ಯಕ್ರಮಗಳನ್ನು ಮಾಡುತ್ತಿದೆ ಕಾರಣ ಅಲ್ಪ ಸಂಖ್ಯಾತ–ರಿಗೆ ಸಾಮಾಜಿಕ ನ್ಯಾಯ ಕೊಡುವುದು ಕಾಂಗ್ರೆಸ್ ಜವಬ್ದಾರಿಯಾಗಿದೆ ಎಂದು ಮುಜಾಹಿದ್ ಮರ್ಚೆಡ್ ತಿಳಿಸಿದ್ದಾರೆ.

ಅಲ್ಪಸಂಖ್ಯಾತರಿಗೆ ಸಮಾನ ಅವಕಾಶ ಮತ್ತು ಗೌರವ ನೀಡುವ ಮೂಲಕ ಮಾತ್ರ ಕಾಂಗ್ರೆಸ್ ಪಕ್ಷ ತನ್ನ ಬದ್ಧತೆಯನ್ನು ನೈಜಗೊಳಿಸಿ, 2028ರಲ್ಲಿ ಮತ್ತೆ ಅಧಿಕಾರಕ್ಕೆ ಬರಲು ಸಾಧ್ಯವಾಗುತ್ತದೆ ಎಂದು ಮುಜಾಹಿದ್ ಮರ್ಚೆಡ್ ಪತ್ರಿಕಾ ಹೇಳಿಕೆ ಮೂಲಕ ಒತ್ತಾಯಿಸಿದ್ದಾರೆ ಮತ್ತು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮೀತಿಯ ಅಧ್ಯಕ್ಷ ಸ್ಥಾನವೂ ಸಹ ಸುಮಾರು 60 ವರ್ಷಗಳ ಅವಧಿಯಲ್ಲಿ ಮುಸ್ಲಿಂ ಸಮುದಾಯಕ್ಕೆ ನೀಡದೇಯೆ ಇರುವುದು ಮುಸ್ಲಿಂ ಸಮುದಾಯದಲ್ಲಿ ಅಸಮಧಾನ ಇದೇ ಈ ಸ್ಥಾನವನ್ನು ಸಹ ಈ ಬಾರಿ ಮುಸ್ಲಿಂ ಸಮುದಾಯಕ್ಕೆ ನೀಡಬೇಕೆಂದು ಈಗಾಗಲೆ ಸಮುದಾಯದಿಂದ ಬಹಳ ಸಾರಿ ಕೇಳಿಕೊಳ್ಳಲಾಗಿತ್ತು ಅಧ್ಯಕ್ಷ ಸ್ಥಾನವು ತೆರವಾದರೆ ಮುಸ್ಲಿಂ ಸಮುದಾಯಕ್ಕೆ ನೀಡಬೇಕೆಂದು ಮುಜಾಹಿದ್ ಮನವಿ ಮಾಡಿದ್ದಾರೆ.

# ಅಶಕ್ತರಿಗೆ ಆಸರೆಯಾದ ಧರ್ಮಸ್ಥಳ ಸಂಸ್ಥೆಯ ಜನಮಂಗಲ ಕಾರ್ಯಕ್ರಮ :ಎಸ್.ವಸಂತ



ಸಿರುಗುಪ್ಪ: ತೆಕ್ಕಲಕೋಟೆ ಪಟ್ಟಣದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ.ಸಿ ಟ್ರಸ್ಟ್

ನೈಜ್ಯ ದೆಸೆ ನ್ಯೂಸ್

**ವತಿಯಿಂದ ಜನಮಂಗಲ ಕಾರ್ಯಕ್ರಮದಡಿಯಲ್ಲಿ ಅಶಕ್ತರು/ವಿಶೇಷ ಚೇತನರಿಗೆ ಮಂಜೂರುಗೊಂಡ ವಾಟರ್ ಬೆಡ್‌ನ್ನು ಫಲಾನುಭವಿ ಹುಸೇನಬೀ ಯವರಿಗೆ ತಾಲೂಕಿನ ಕ್ಷೇತ್ರ ಯೋಜನಾಧಿಕಾರಿ ಎಸ್. ವಸಂತ ರವರು ವಿತರಿಸಿದರು.**

ನಂತರ ಮಾತನಾಡಿದ ಅವರು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ರಾಜ್ಯಾದ್ಯಂತ ಅನೇಕ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತಿದೆ ಅದರಲ್ಲೂ ವಿಶೇಷವಾಗಿ ಅಶಕ್ತರು/ವಿಶೇಷ ಚೇತನರಿಗೆ ಜಲಮಂಗಲ ಕಾರ್ಯಕ್ರಮದಡಿ ವೀಲ್ ಚೇರ್, ಕಮೋಡ್ ಚೇರ್, ಯು ಸೇಫ್ ವಾಕರ್, ತ್ರೀ ಲೆಗ್ ಸ್ಟಿಕ್, ಸಿಂಗಲ್ ಲೆಗ್ ಸ್ಟಿಕ್, ವಾಟರ್ ಬೆಡ್ ಸಲಕರಣೆಗಳನ್ನು ವಿತರಿಸಲಾಗುತ್ತಿದ್ದು,

ತಾಲೂಕಿನಲ್ಲಿ ಈವರೆಗೆ 38.50 ಲಕ್ಷ ಮೌಲ್ಯದ ಸಲಕರಣೆಗಳನ್ನು ವಿತರಿಸಲಾಗಿದ್ದು ವಿಶೇಷ ಚೇತನರು ಗೌರವಯುತ ಜೀವನ ನಡೆಸಲು ಸಹಕಾರಿಯಾಗಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತಿ ಸದಸ್ಯ ನಾಸಿರ್ ಹುಸೇನ್, ಹೊಸಪೇಟೆ ಟೈಮ್ಸ್ ಪತ್ರಿಕೆಯ ವರದಿಗಾರ ಖಾಜಾಮೊದ್ದಿನ್, ಸೇವಾ ಪ್ರತಿನಿಧಿ ಪರಿದಾಬಾನು, ಸಿ ಎಸ್ ಸಿ ಸೇವಾದಾರ ಶ್ರೀನಿವಾಸ ಉಪಸ್ಥಿತರಿದ್ದರು. ವರದಿ : ಮಸೀದಿ ,ಅಬ್ದುಲ್ ಗೌಸ್, ಸಿರುಗುಪ್ಪ

# "ಸಕಾಲ ಅರ್ಜಿ ತ್ವರಿತ ವಿಲೇವಾರಿ ಮಾಡಬೇಕು" ಮಸ್ಕಿ ಪುರಸಭೆ ಕಚೇರಿಯಲ್ಲಿ ಶುಕ್ರವಾರ ನಡೆದ ಸಿಬ್ಬಂದಿ ಹಾಗೂ ಅಧಿಕಾರಿಗಳ ಸಭೆಯಲ್ಲಿ ಪುರಸಭೆ ಅಧ್ಯಕ್ಷ ಸುರೇಶ ಹರಸೂರು ಮಾತನಾಡಿದರು.

ನೈಜ್ಯ ದೆಸೆ ನ್ಯೂಸ್

**ಮಸ್ಕಿ: 'ಸಕಾಲದಲ್ಲಿ ಸಲ್ಲಿಕೆಯಾದ ಪುರಸಭೆಗೆ ಸಂಬಂಧಿಸಿದ ವಿವಿಧ ಅರ್ಜಿಗಳನ್ನು ತ್ವರಿತವಾಗಿ ವಿಲೇವಾರಿ ಮಾಡಿ, ಜನರಿಗೆ ಸೂಕ್ತ ಉತ್ತರ ನೀಡಬೇಕು' ಎಂದು ಪುರಸಭೆ ಅಧ್ಯಕ್ಷ ಸುರೇಶ ಹರಸೂರು ಸೂಚಿಸಿದರು.**

ಪುರಸಭೆ ಕಚೇರಿಯಲ್ಲಿ ನಡೆದ ಸಿಬ್ಬಂದಿ ಹಾಗೂ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿ, ಪುರಸಭೆ ಮೇಲೆ ಜನರು ಬಹಳ ನಿರೀಕ್ಷೆ ಇಟ್ಟುಕೊಂಡಿದ್ದಾರೆ. ತ್ವರಿತವಾಗಿ ಅರ್ಜಿಗಳು ವಿಲೇವಾರ ಆಗದಿದ್ದರೆ, ಜನರು ಕಚೇರಿ ಅಲೆದಾಡಬೇಕಾಗುತ್ತದೆ. ಇದ–ರಿಂದ ಪುರಸಭೆಗೆ ಕೆಟ್ಟ ಹೆಸರು ಬರುತ್ತದೆ' ಎಂದರು. "ನೀರು ಹಾಗೂ ಆಸ್ತಿ ತೆರಿಗೆ ವಸೂಲಿಯಲ್ಲಿ ಸಿಬ್ಬಂದಿ ಇನ್ನೂ ಹೆಚ್ಚು ಕೆಲಸ ಮಾಡಬೇಕು. ತೆ–ರಿಗೆ ಬಾಕಿ ಉಳಿಸಿಕೊಂಡವರ ಮನೆಗೆ ತೆರಳಿ ವಸೂಲಿ ಮಾಡುವ ಮೂಲಕ ಪುರಸಭೆಗೆ ವರಮಾನ ತಂದು ಕೊಡಬೇಕು' ಎಂದು ಹೇಳಿದರು.



'ಮಳೆಗಾಲ ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ ತಗ್ಗು ಪ್ರದೇಶಗಳಲ್ಲಿ ನೀರು ನಿಂತರೇ ಕೂಡಲೇ ತೆರವುಗೊಳಿಸಬೇಕು. ಕೂಡಲೇ ಬೀಚಿಂಗ್ ಪೌಡರ್ ಹಾಕಬೇಕು ಹಾಗೂ ಸ್ವಚ್ಛತೆ ಕಡೆ ಹೆಚ್ಚು ಗಮನ ಕೊಡಬೇಕು' ಎಂದು ಅವರು ತಿಳಿಸಿದರು. ಕುಡಿಯುವ ನೀರಿನ ಬಗ್ಗೆ ಸಾಕಷ್ಟು ದೂರುಗಳು ಬರುತ್ತಿವೆ. ಕೆರೆಯಲ್ಲಿ ನೀರಿನ ಸಂಗ್ರಹ 10 ಅಡಿಯಷ್ಟು ಇದೆ. ತುಂಗಭದ್ರಾ ಎಡದಂಡೆ ಕಾಲುವೆಗೆ ನೀರು ಬರುವವರೆಗೂ ನೀರು ಬಳಕೆಯಾಗಬೇಕಾಗಿದ್ದು, ನೀರು ಬಿಡುವ ಸಿಬ್ಬಂದಿ ಹಾಗೂ ಅದರ ಮೇಲ್ವಿಚಾರಕರು ಸರಿಯಾಗಿ ನೀರಿನ ಬಳಕೆ ಮಾಡಿಕೊಳ್ಳಬೇಕು. ನೀರು ನಿರ್ವಹಣೆಯಲ್ಲಿ ನಿರ್ಲಕ್ಷ್ಯ ಮಾಡಬಾರದು ಹಾಗೂ ದೂರುಗಳು ಬಾರದಂತೆ ಕೆಲಸ ಮಾಡಬೇಕು' ಎಂದು ಸೂಚಿಸಿದರು.



'ಪುರಸಭೆಗೆ ಖಾತಾ ನಕಲು ಬಯಸಿ ಬರುವ ಅರ್ಜಿಗಳನ್ನು ಈಗಾಗಲೇ ತ್ವರಿತವಾಗಿ ನೀಡುವ ವ್ಯವಸ್ಥೆ ಮಾಡಲಾಗಿದೆ. ಸಾರ್ವಜನಿಕರಿಂದ ಸಲ್ಲಿಕೆಯಾದ ಅರ್ಜಿಗಳನ್ನು ಆಯಾ ದಿನವೇ ವಿಲೇವಾರಿ ಮಾಡಬೇಕು' ಎಂದು ಹೇಳಿದರು. ಪುರಸಭೆ ಉಪಾಧ್ಯಕ್ಷೆ ಗೀತಾ ಶಿವರಾಜ ಬುಕ್ಕಣ್ಣ, ಸ್ಥಾಯಿ ಸಮಿತಿ ಅಧ್ಯಕ್ಷ ಚೇತನ ಪಾಟೀಲ, ಮುಖ್ಯಾಧಿಕಾರಿ ನರಸರೆಡ್ಡಿ ಹಾಗೂ

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ರಾಯಚೂರು ಅಭಿವೃದ್ಧಿಗಾಗಿ ಕೆ ಎಸ್ ಎನ್ ಸಮಿತಿಯಿಂದ 'ಸಂಕಲ್ಪದ ಸಮಾಗಮ ಸಮಾವೇಶ

ನೈಜ್ಯ ದೆಸೆ ನ್ಯೂಸ್

**ಕವಿತಾಳ: ರಾಯಚೂರು ಜಿಲ್ಲೆಯ ಸಮಗ್ರ ನೀರಾವರಿ ಯೋಜನೆಗಳ ಅನುಷ್ಠಾನ ಹಾಗೂ ಜಿಲ್ಲೆಗೆ ಅಗತ್ಯವಿರುವ ಏಮ್ಸ್ ಆಸ್ಪತ್ರೆಯನ್ನು ಮಂಜೂರು ಮಾಡುವಂತೆ ಆಗ್ರಹಿಸಿ ಕೆ ಎಸ್ ಎನ್ ಸಾಮಾಜಿಕ ಸೇವಾ ಸಮಿತಿಯ ಕವಿತಾಳ ಭಾಗದ ವತಿಯಿಂದ 'ಸಂಕಲ್ಪದ ಸಮಾಗಮ' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.**

ಈ ವಿಶೇಷ ಕಾರ್ಯಕ್ರಮವು ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ತಾಲೂಕಿನ ಗೌರಿಗದ್ದೆಯ ವಿನಯ ಗುರೂಜಿ ಯವರ ದಿವ್ಯ ಸಾನಿಧ್ಯದಲ್ಲಿ ಜರುಗಲಿದ್ದು, ಜಿಲ್ಲೆಯ ಅಭಿವೃದ್ಧಿಯ ವಿಷಯದಲ್ಲಿ ಸರ್ಕಾರಗಳು ತೋರುತ್ತಿರುವ ನಿರ್ಲಕ್ಷ್ಯದ ವಿರುದ್ಧ ಧ್ವನಿ ಎತ್ತಲು ಸಮಿತಿಯು ಸಜ್ಜಾಗಿದೆ.



ಜಿಲ್ಲೆಯ ಅಭಿವೃದ್ಧಿಯ ವಿಷಯದಲ್ಲಿ ಸರ್ಕಾರಗಳು ತೋರುತ್ತಿರುವ ನಿರ್ಲಕ್ಷ್ಯವನ್ನು ಖಂಡಿಸಿ ಈ ಸಮಾವೇಶವನ್ನು ಆಯೋಜಿಸಲಾಗಿದೆ ಎಂದು ಸಮಿತಿಯ ಪದಾಧಿಕಾರಿಗಳು ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಯಚೂರು ಜಿಲ್ಲೆಯ ರೈತರ ಜೀವನಾಡಿಯಾಗಿರುವ ನವಲಿ ಜಲಾಶಯ ನಿರ್ಮಾಣ, ತಿಂತಿಣಿ ಬ್ರಿಡ್ಜ್ ಬಳಿ ಜಲಾಶಯದ ನಿರ್ಮಾಣ ಹಾಗೂ ಜಿಲ್ಲೆಗೆ ಮಂಜೂರಾಗಬೇಕಾದ ಏಮ್ಸ್ ಸಂಸ್ಥೆಯ ಸ್ಥಾಪನೆಗೆ ಒತ್ತಾಯಿಸುವುದು ಈ ಸಮಾವೇಶದ ಪ್ರಮುಖ ಉದ್ದೇಶವಾಗಿದೆ.

ಈ ಬೇಡಿಕೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ, ಕೂಡಲೇ ಅನುಷ್ಠಾನಕ್ಕೆ ತರಬೇಕೆಂದು ಅವರು ಆಗ್ರಹಿಸಿದರು. ಈ ವಿಶೇಷ ಅಭಿಯಾನದ ಭಾಗವಾಗಿ ಸಮಿತಿಯು ತನ್ನ ಹುಟ್ಟುಹಬ್ಬವನ್ನು ಸಮಾಜಮುಖಿ ಚಿಂತನೆಯೊಂದಿಗೆ ಸರಳವಾಗಿ ಆಚರಿಸಲು ನಿರ್ಧ–ರಿಸಿದೆ. ಈ ಮೂಲಕ ಜಿಲ್ಲೆಯ ಹಿತಾಸಕ್ತಿ ಕಾಪಾಡುವ ಸಂಕಲ್ಪವನ್ನು ಬಲಪಡಿಸಲು ನಿರ್ಧರಿಸಲಾಗಿದೆ. ಈ ಸಮಾವೇಶಕ್ಕೆ ಜಿಲ್ಲೆಯ ಜನತೆ ಹಾಗೂ ವಿವಿಧ ಸಂಘಟನೆಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವ ಮೂಲಕ ಹೋರಾಟಕ್ಕೆ ಬೆಂಬಲ ನೀಡಬೇಕೆಂದು ಅವರು ಮನವಿ ಮಾಡಿದರು. ರಾಯಚೂರು ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿಗೆ ಈ ಕಾರ್ಯಕ್ರಮವು ಸರ್ಕಾರದ ಮೇಲೆ ಒತ್ತಡ ಹೇರುವ ಕಾರ್ಯವನ್ನು ಮಾಡಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಕೆಎಸ್‌ಎನ್ ಅಭಿಮಾನಿ ಬಳಗದ ಪ್ರಮುಖ ಮುಖಂಡರಾದ ಯಮನಪ್ಪ ದಿನ್ನಿ ಪ್ರಾ.ಕ.ಸ.ಸ.ನಿ ಕವಿತಾಳ ಅಧ್ಯಕ್ಷ , ಈರಣ್ಣ ಕೇಳಗೇರಿ, ಹೆಚ್ ಬಸವರಾಜ ಮಾಜಿ ಪ.ಪಂ ಸದಸ್ಯ, ಅರಳಪ್ಪ ತೂಪ್ಪದೂರು, ಗಫೂರ ಸಾವ್ , ನೀಲಕಂಠ ಆಲ್ಕಕೊಡ್ ರಮೇಶ ನಗನೂರು, ಕ–ರಿಯಪ್ಪ ದಿನ್ನಿ, ಗೌರಮ್ಮ ಗಂ ಮೌನೇಶ, ನಿಂಗಣ್ಣ ಯಡವಟ್ಟ, ಸಂಜೀವ ಗೌಡ ರಡ್ಡಿ, ಮಲ್ಲಯ್ಯ ಸಾಹುಕಾರ ಸೈದಾಪುರು, ಆಂಜನೇಯ ಹಣಗಿ, ಲಿಂಗಣ್ಣ ನಾಸಲ್ , ಮಲ್ಲಯ್ಯ ಪಾತಾಪುರು, ರಮೇಶ ನಾಯಕ ಹುಸೇನಪುರು, ಪ್ರಶಾಂತ ಗೌಡ, ಯಲ್ಲಪ್ಪ ಕೊಡ್ಲಿ, ಯಮನಪ್ಪ ಭಜಂತ್ರಿ, ಬಸವರಾಜ ಸಾಹುಕಾರ ಸೈಸಾಪುರು, ಮೌನೇಶ ಮೇಸ್ತ್ರಿ,

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಅಗ್ನಿಶಾಮಕ ತಂತ್ರಜ್ಞಾನ ಮತ್ತು ಕೈಗಾರಿಕಾ ಸುರಕ್ಷತಾ


ಅಗ್ನಿಶಾಮಕ ತಂತ್ರಜ್ಞಾನ ಮತ್ತು ಕೈಗಾರಿಕಾ ಸುರಕ್ಷತಾ ನಿರ್ವಹಣೆಯು ಬೆಂಕಿ ತಡೆಗಟ್ಟುವಿಕೆ, ಅಪಾಯ ನಿಯಂತ್ರಣ ಮತ್ತು ಕೆಲಸದ ಸ್ಥಳ ಸುರಕ್ಷತಾ ಪ್ರೋಟೋಕಾಲ್‌ಗಳ ಮೇಲೆ ಕೇಂದ್ರೀಕೃತವಾದ ವೃತ್ತಿಪರ ಕೋರ್ಸ್ ಆಗಿದೆ. ಕೈಗಾರಿಕೆಗಳು, ನಿರ್ಮಾಣ ಸ್ಥಳಗಳು ಮತ್ತು ಉತ್ಪಾದನಾ ಘಟಕಗಳಿಗೆ ಅಗತ್ಯವಾದ ಸುರಕ್ಷತಾ ಅಧಿಕಾರಿಗಳು ಮತ್ತು ಎಚ್‌ಎಸ್‌ಇ (ಆರೋಗ್ಯ, ಸುರಕ್ಷತೆ ಮತ್ತು ಪರಿಸರ) ಎಂಜಿನಿಯರ್‌ಗಳಾಗಲು ಇದು ವಿದ್ಯಾರ್ಥಿಗಳಿಗೆ ತರಬೇತಿ ನೀಡುತ್ತದೆ. ಪ್ರಮುಖ ಕೋರ್ಸ್ ವಿವರಗಳು ಇಲ್ಲಿವೆ:ಕೋರ್ಸ್ ಅವಲೋಕನ (ಕೋರ್ಸ್ ಅವಲೋಕನ)ಅವಧಿ (ಅವಧಿ): 1 ವರ್ಷ (ಪ್ರಮಾಣಪತ್ರ/ಐಟಿಐ ಮಟ್ಟ) ಮಟ್ಟ).ಅರ್ಹತೆ (ಅರ್ಹತೆ): ಕನಿಷ್ಠ 10 ನೇ ತರಗತಿ ಅಥವಾ 12 ನೇ ತರಗತಿ ತೇರ್ಗಡೆ.ದೈಹಿಕ ಅರ್ಹತೆ (ದೈಹಿಕ ಅಗತ್ಯತೆಗಳು): ಕನಿಷ್ಠ ಎತ್ತರ 165 ಸೆಂ.ಮೀ. ಮತ್ತು ತೂಕ 52 ಕೆ.ಜಿ. ಇರಬೇಕು. ಉದ್ಯೋಗಾವಕಾಶಗಳು (Career Opportunities)ಈ ಕೋರ್ಸ್ ಪೂರ್ಣಗೊಳಿಸಿದ ನಂತರ ನೀವು ಈ ಕೆಳಗಿನ ಹುದ್ದೆಗಳನ್ನು ಪಡೆಯಬಹುದು:ಸುರಕ್ಷತಾ ಅಧಿಕಾರಿ (Safety Officer)ಫೈರ್ ಸೇಫ್ಟಿ ಸೂಪರ್‌ವೈಸರ್ (Fire Safety Supervisor)ಎಚ್‌ಎಸ್‌ಇ ಇಂಜಿನಿಯರ್ (HSE Engineer)ಫೈರ್ ಇನ್‌ಸ್ಪೆಕ್ಟರ್ (Safety/Fire Inspector)

## ಭಾವನಾತ್ಮಕ ಬೀಳ್ಕೊಡುಗೆ ಹೆಮ್ಮೆಯ ಮಲ್ಲಿಕಾರ್ಜುನ್ ಬೈರೆ ಶಿಕ್ಷಕರಿಗೆ ಗೌರವದ ವಿದಾಯ

ನೈಜ್ಯ ದೆಸೆ ನ್ಯೂಸ್

**ಬಳಗಾನೂರ: ಮೇ 30 ಮಸ್ಕಿ ತಾಲೂಕಿನ ಬಳಗಾನೂರು ಪಟ್ಟಣದ ಶ್ರೀ ಬಸವೇಶ್ವರ ಸಂಯುಕ್ತ ಪ್ರೌಢಶಾಲೆಯ ಹೆಮ್ಮೆಯ ವೃತ್ತಿ ಶಿಕ್ಷಕರಾದ ಶ್ರೀ ಮಲ್ಲಿಕಾರ್ಜುನ್ ಬೈರೆ ಸರ್ ಅವರ ಬೀಳ್ಕೊಡುಗೆ ಸಮಾರಂಭವನ್ನು ಶಾಲಾ ಆವರಣದಲ್ಲಿ ಅತ್ಯಂತ ಗೌರವಪೂರ್ವಕವಾಗಿ ಹಾಗೂ ಭಾವನಾತ್ಮಕವಾಗಿ ಆಯೋಜಿಸಲಾಯಿತು.**

ಕಾರ್ಯಕ್ರಮವು ಶಾಲೆಯ ಕನ್ನಡ ಶಿಕ್ಷಕಿಂ–ಯಾದ ಶ್ರೀಮತಿ ಬೋರಮ್ಮ ಅವರ ಅರ್ಥಪೂರ್ಣ ನಿರೂಪಣೆಯೊಂದಿಗೆ ಆರಂಭವಾಯಿತು. ನಂತರ ನಿವೃತ್ತ ಗುರುಗಳ ಸನ್ಮಾನ ಕಾರ್ಯಕ್ರಮ ನಡೆಯಿತು. ತಮ್ಮ ಸುದೀರ್ಘ ಸೇವಾ ಅವಧಿಯಲ್ಲಿ ಶಾಲೆಯ ಬೆಳವಣಿಗೆ, ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿ ಹಾಗೂ ಸಂಸ್ಥೆಯ ಅಭಿವೃದ್ಧಿಗಾಗಿ ಅವರು ಸಲ್ಲಿಸಿದ ನಿಸ್ವಾರ್ಥ ಸೇವೆಯನ್ನು ಎಲ್ಲರೂ ಕೃತಜ್ಞತೆಯಿಂದ ಸ್ಮರಿಸಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಸಿಬ್ಬಂದಿ ವರ್ಗದವರು, ಶಿಕ್ಷಕರು ಹಾಗೂ ಉಪನ್ಯಾಸಕರು



ಶ್ರೀ ಮಲ್ಲಿಕಾರ್ಜುನ್ ಸರ್ ಅವರ ಸರಳತೆ, ಸಮಯಪ್ರಜ್ಞೆ, ಕರ್ತವ್ಯನಿಷ್ಠೆ ಮತ್ತು ಮಾನವೀಯ ಗುಣಗಳನ್ನು ಕೊಂಡಾಡಿದರು.

ಪ್ರತಿಯೊಬ್ಬರೂ ತಮ್ಮ ನೆನಪುಗಳನ್ನು ಹಂಚಿಕೊಳ್ಳುವಾಗ ಸಭಾಂಗಣವು ಭಾವನಾತ್ಮಕ ವಾತಾವರಣಕ್ಕೆ ಸಾಕ್ಷಿಯಾಯಿತು. ಅನೇಕರು ತಮ್ಮ ಕಣ್ಣೀರನ್ನು ತಡೆಯಲಾಗದೆ ಭಾವುಕರಾದರು. ಶಾಲೆಯ ಪ್ರತಿಯೊಂದು ಕಾರ್ಯವನ್ನೂ ತಮ್ಮದೇ ಜವಾಬ್ದಾರಿಯೆಂದು ಭಾವಿಸಿ, ಯಾವುದೇ ಕೆಲಸವನ್ನು ಹಿಂಜರಿಯದೆ ಅತ್ಯಂತ ಪ್ರಾಮಾಣಿಕತೆಯಿಂದ ನಿರ್ವಹಿಸುತ್ತಿದ್ದ ಶ್ರೀ ಮಲ್ಲಿಕಾರ್ಜುನ್ ಸರ್ ಅವರ ಸೇವೆ ಶಾಲೆಯ ಇತಿಹಾಸದಲ್ಲಿ ಸದಾ ಸ್ಮರಣೀಯವಾಗಿರಲಿದೆ. ಶಾಲೆಯ ಮುಖ್ಯೋಪಾಧ್ಯಾಯರಾದ ಶ್ರೀ ಅಮರನಾಥ್ ಹಳ್ಳೂರ್ ಅವರು ಮಾತನಾಡಿ, ನಿವೃತ್ತ ಗುರುಗಳೊಂದಿಗೆ ಕಳೆದ ಅಮೂಲ್ಯ ಕ್ಷಣಗಳನ್ನು ನೆನಪಿಸಿಕೊಂಡರು.

ತಮ್ಮ ಭಾವನೆಗಳನ್ನು ವ್ಯಕ್ತಪಡಿಸುತ್ತಾ ಆತ್ಮೀಯ ಅಪ್ಪುಗೆಯ ಮೂಲಕ ಗುರುಗಳಿಗೆ ಬೀಳ್ಕೊಡುಗೆ ನೀಡಿದ ಕ್ಷಣವು ಎಲ್ಲರ ಮನಸ್ಸನ್ನು ಸ್ಪರ್ಶಿಸಿತು. ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲರು, ಉಪನ್ಯಾಸಕರು, ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗದವರು ಶ್ರೀ ಮಲ್ಲಿಕಾರ್ಜುನ್ ಸರ್ ಅವರನ್ನು ಸನ್ಮಾನಿಸಿ, ಅವರ ಸೇವೆಯನ್ನು ಗೌರವಿಸಿದರು. ನಿವೃತ್ತಿಯು ಸೇವೆಯ ಅಂತ್ಯವಲ್ಲ, ಬದುಕಿನ ಹೊಸ ಅಧ್ಯಾಯದ ಆರಂಭ ಎಂಬ ಸಂದೇಶದೊಂದಿಗೆ ಅವರ ಮುಂದಿನ ಜೀವನ ಆರೋಗ್ಯ, ನೆಮ್ಮದಿ, ಸಂತೋಷ ಹಾಗೂ ಸಮೃದ್ಧಿಯಿಂದ ಕೂಡಿರಲೆಂದು ಹಾರೈಸಲಾಯಿತು. "ಗುರುಗಳು ನಿವೃತ್ತರಾಗಬಹುದು, ಆದ–ರೆ ಅವರ ಜ್ಞಾನ, ಮಾರ್ಗದರ್ಶನ ಮತ್ತು ಮೌಲ್ಯಗಳು ಎಂದಿಗೂ ನಿವೃತ್ತಿಯಾಗುವುದಿಲ್ಲ." ?? ಶ್ರೀ ಮಲ್ಲಿಕಾರ್ಜುನ್ ಬೈರೆ ಸರ್ ಅವ–ರಿಗೆ ಗೌರವಪೂರ್ವಕ ವಂದನೆಗಳು ಹಾಗೂ ನಿವೃತ್ತಿ ಜೀವನಕ್ಕೆ ಹೃತ್ಪೂರ್ವಕ ಶುಭಾಶಯಗಳು.

## ಅಂತರರಾಷ್ಟ್ರೀಯ ಕಾಮಿಕ್ಸ್ ಸ್ಪರ್ಧೆಯಲ್ಲಿ ಜಿಲ್ಲೆಯ ಸಿರಿ ಪರವತಿನೇನಿಗೆ ಗೌರವ ಪ್ರಶಸ್ತಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯ ಅಮರೇಶ್ವರ ಕ್ಯಾಂಪ್ ನಿವಾಸಿ ವಿನೋದಕುಮಾರ ಅವರ ಪುತ್ರಿ ಸಿರಿ ಪರವತಿನೇನಿ ಅವರು ಅಂತರರಾಷ್ಟ್ರೀಯ ಮಟ್ಟದ ನಾಲ್ಕನೇ ಎಫ್‌ಪಿಜಿ ವಿಶ್ವವಿದ್ಯಾಲಯಗಳ ಎಸ್‌ಡಿಜಿಗಳ ಇಂಗ್ಲಿಷ್ ನಾಲ್ಕು–ಫ್ರೇಮ್ ಕಾಮಿಕ್ಸ್ ಸ್ಕ್ರಿಪ್ಟ್ ಸ್ಪರ್ಧೆ–2026ರಲ್ಲಿ ಗೌರವ ಪ್ರಶಸ್ತಿಗೆ ಭಾಜನರಾಗಿದ್ದಾರೆ.**

ಪ್ರಸ್ತುತ ಬೆಂಗಳೂರಿನ ಪ್ರೆಸಿಡೆನ್ಸಿ ವಿಶ್ವವಿದ್ಯಾಲಯದ ಸ್ಕೂಲ್ ಆಫ್ ಡಿಸೈನ್ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿರುವ ಸಿರಿ, "ಜಸ್ಟ್




ಒನ್ ಚಾಯಿಸ್" ಎಂಬ ಶೀರ್ಷಿಕೆಯ ಕಾಮಿಕ್ಸ್ ಕೃತಿಯ ಮೂಲಕ ಈ ಸಾಧನೆ ಮಾಡಿದ್ದಾರೆ. ವಿಶ್ವಸಂಸ್ಥೆಯ ಸುಸ್ಥಿರ ಅಭಿವೃದ್ಧಿ ಗುರಿಗಳಲ್ಲಿ ಒಂದಾದ ಎಸ್‌ಡಿಜಿ–12 (ಜವಾಬ್ದಾರಿಯುತ ಬಳಕೆ ಮತ್ತು ಉತ್ಪಾದನೆ) ವಿಷಯವನ್ನು ಆಧರಿಸಿ ರಚಿಸಲಾದ ಈ ಕಾಮಿಕ್ಸ್, ಪ್ಲಾಸ್ಟಿಕ್ ತ್ಯಾಜ್ಯದ ದುಷ್ಪರಿಣಾಮಗಳು ಹಾಗೂ ಪರಿಸರ ಸ್ನೇಹಿ ಆಯ್ಕೆಗಳ ಮಹತ್ವವನ್ನು ಪರಿಣಾಮಕಾರಿಯಾಗಿ ಚಿತ್ರಿಸಿದೆ.

ತೈವಾನ್‌ನ ಮಿಂಗ್ ಚಿ ತಂತ್ರಜ್ಞಾನ ವಿಶ್ವವಿದ್ಯಾಲಯ ಹಾಗೂ ಚಾಂಗ್ ಗುಂಗ್ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯಗಳು ಜಂ–ಟಿಯಾಗಿ ಆಯೋಜಿಸಿದ್ದ ಈ ಅಂತರರಾಷ್ಟ್ರೀಯ ಸ್ಪರ್ಧೆಯಲ್ಲಿ ವಿವಿಧ ದೇಶಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಸ್ಪರ್ಧೆಯಲ್ಲಿ ಸಿರಿಯವರ ಸೃಜನಶೀಲತೆ, ಸಾಮಾಜಿಕ ಕಾಳಜಿ ಹಾಗೂ ಪರಿಸರ ಜಾಗೃತಿ ಮೂಡಿಸುವ ಸಂದೇಶಕ್ಕೆ ತೀರ್ಪುಗಾರರಿಂದ ಮೆಚ್ಚುಗೆ ವ್ಯಕ್ತವಾಗಿದೆ. ಸಿರಿಯವರ ಸಾಧನೆಗೆ ಪ್ರೆಸಿಡೆನ್ಸಿ ವಿಶ್ವವಿದ್ಯಾಲಯ ಅಭಿನಂದನೆ ಸಲ್ಲಿಸಿದ್ದು, ಜಿಲ್ಲೆಯ ಜನರು ಹಾಗೂ ಕುಟುಂಬಸ್ಥರು ಸಂತಸ ವ್ಯಕ್ತಪಡಿಸಿದ್ದಾರೆ. ಮುಂದಿನ ದಿನಗಳಲ್ಲಿ ರಾಷ್ಟ್ರೀಯ ಕಿರುಚಿತ್ರ ಸ್ಪರ್ಧೆಯಲ್ಲೂ ಭಾಗವಹಿಸಲು ಸಿದ್ಧತೆ ನಡೆಸುತ್ತಿರುವ ಸಿರಿ, ಮತ್ತಷ್ಟು ಸಾಧನೆ ಮಾಡುವ ವಿಶ್ವಾಸ ಮೂಡಿಸಿದ್ದಾರೆ.

## CLP ನಾಯಕನಾಗಿ ಡಿ.ಕೆ.ಶಿವಕುಮಾರ್ ಆಯ್ಕೆ ; ಬುಧವಾರ ಸಿಎಂ ಆಗಿ ಪ್ರಮಾಣ ವಚನ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ವಿಧಾನಸೌಧದಲ್ಲಿ ಇಂದು ನಡೆದ ಕಾಂಗ್ರೆಸ್ ಶಾಸಕಾಂಗ ಪಕ್ಷದ (CLP) ಸಭೆಯಲ್ಲಿ ಡಿ.ಕೆ. ಶಿವಕುಮಾರ್ ಅವರನ್ನು ಶಾಸಕಾಂಗ ಪಕ್ಷದ ನಾಯಕನಾಗಿ ಆಯ್ಕೆ ಮಾಡಲಾಗಿದೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಡಿ.ಕೆ. ಶಿವಕುಮಾರ್ ಅವರ ಹೆಸರನ್ನು ಮುಖ್ಯಮಂತ್ರಿ ಹುದ್ದೆಗೆ ಅಧಿಕೃತವಾಗಿ ಪ್ರಸ್ತಾಪಿಸಿದರು.**



ಡಿ.ಕೆ. ಶಿವಕುಮಾರ್ ಅವರು ಬುಧವಾರ ನೂತನ ಮುಖ್ಯಮಂತ್ರಿಯಾಗಿ ಒಂಬತ್ತು ಸಚಿವರೊಂದಿಗೆ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಸಭೆಯಲ್ಲಿ ಎಐಸಿಸಿ ವೀಕ್ಷಕರು ಹಾಗೂ ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ. ವೇಣುಗೋಪಾಲ್ ಮತ್ತು ರಣದೀಪ್ ಸಿಂಗ್ ಸುರ್ಜೇವಾಲ ಉಪಸ್ಥಿತರಿದ್ದರು. ಸರಳ ಪ್ರಮಾಣ ವಚನಕ್ಕೆ ಸಿದ್ಧತೆ ಆರಂಭದಲ್ಲಿ ಕಂಠೀರವ ಕ್ರೀಡಾಂಗಣದಲ್ಲಿ ಬೃಹತ್ ಪ್ರಮಾಣದ ಪ್ರಮಾಣ ವಚನ ಸ್ವೀಕಾರ ಸಮಾರಂಭ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗಿತ್ತು. ಆದರೆ ಬುಧವಾರ ಕಾರ್ಯದಿನವಾಗಿರುವುದರಿಂದ ಬೆಂಗಳೂರಿನಲ್ಲಿ ಸಂಚಾರ ದಟ್ಟಣೆ ಹೆಚ್ಚಾಗಿ ಸಾರ್ವಜನಿಕರಿಗೆ ತೊಂದರೆ ಉಂಟಾಗುವ ಸಾಧ್ಯತೆಯನ್ನು ಪರಿಗಣಿಸಿ, ಸರಳವಾಗಿ ಕಾರ್ಯಕ್ರಮ ಆಯೋಜಿಸಲು ನಿರ್ಧರಿಸಲಾಗಿದೆ ಎನ್ನಲಾಗಿದೆ. ವಿಧಾನಸೌಧದ ಮೆಟ್ಟಿಲುಗಳ ಬಳಿ ಅಥವಾ ಲೋಕಭವನದಲ್ಲಿ ಪ್ರಮಾಣ ವಚನ ಸಮಾರಂಭ ನಡೆಯುವ ಸಾಧ್ಯತೆ ಇದ್ದು, ಸುಮಾರು 1,000 ಮಂದಿಗೆ ಮಾತ್ರ ಪ್ರವೇಶಾವಕಾಶ ಕಲ್ಪಿಸುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ಸನ್ ರೈಸ್ ಕಾಲೇಜಿನ ಶನಿವಾರದ ವಿಶೇಷ ಉಪನ್ಯಾಸದಲ್ಲಿ ಹಾವು ಕಚ್ಚಿದಾಗ ಪ್ರಥಮ ಚಿಕಿತ್ಸೆ ಉಪನ್ಯಾಸ ನೀಡಿದ ಡಾ. ಫರ್ಹತ್ ತಬಸ್ಸುಮ್



ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಸನ್ ರೈಸ್ ಡಿ ಫಾರ್ಮಸಿ, ನರ್ಸಿಂಗ್ ಹಾಗೂ ಪ್ಯಾರಾಮೆಡಿಕಲ್ ಕಾಲೇಜು, ಸಿಂಧನೂ–ರಿನಲ್ಲಿ ಪ್ರತೀ ಶನಿವಾರದಂತೆ ಹಮ್ಮಿಕೊಳ್ಳಲಾಗುವ ವಿಶೇಷ ಉಪನ್ಯಾಸ ಕಾರ್ಯಕ್ರಮವು ಈ ಶನಿವಾರವೂ ಯಶಸ್ವಿಯಾಗಿ ನಡೆಯಿತು.**

ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜಿನ ಸಭಾಂಗಣದಲ್ಲಿ ಆಯೋಜಿಸಲಾದ ಈ ಕಾರ್ಯಕ್ರಮಕ್ಕೆ ಫಾತಿಮಾ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ, ಸಿಂಧನೂರಿನ ಖ್ಯಾತ ಮಕ್ಕಳ ತಜ್ಞರಾದ ಡಾ. ಫರ್ಹತ್ ತಬಸ್ಸುಮ್ (MBBS, MD Pediatrics) ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿ "ಹಾವು ಕಚ್ಚಿದಾಗ ಪ್ರಥಮ ಚಿಕಿತ್ಸೆ" ಎಂಬ ಮಹತ್ವದ ವಿಷಯದ ಕು–ರಿತು ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸ ನೀಡಿದರು. ಉಪನ್ಯಾಸದ ವೇಳೆ ಮಾತನಾಡಿದ ಡಾ. ಫರ್ಹತ್ ತಬಸ್ಸುಮ್ ಅವರು, ಗ್ರಾಮೀಣ ಪ್ರದೇಶಗಳಲ್ಲಿ ಹಾವು ಕಚ್ಚುವ ಘಟನೆಗಳು ಹೆಚ್ಚಾಗಿ ಕಂಡುಬರುತ್ತಿದ್ದು, ಅಂತಹ ಸಂದರ್ಭಗಳಲ್ಲಿ ಜನರು ಮೂಢನಂಬಿಕೆಗಳಿಗೆ ಒಳಗಾಗದೆ ವೈಜ್ಞಾನಿಕವಾಗಿ ಪ್ರಥಮ ಚಿಕಿತ್ಸೆ ನೀಡುವುದು ಅತ್ಯಂತ ಅವಶ್ಯಕ ಎಂದು ತಿಳಿಸಿದರು.

ಹಾವು ಕಚ್ಚಿದ ವ್ಯಕ್ತಿಯನ್ನು ಶಾಂತವಾಗಿರಿಸಿ, ಕಚ್ಚಿದ ಅಂಗವನ್ನು ಹೆಚ್ಚು ಚಲಿಸದಂತೆ ನೋಡಿಕೊಳ್ಳುವುದು,ಬಿಗಿಯಾದ ಆಭರಣಗಳು ಅಥವಾ ವಸ್ತುಗಳನ್ನು ತೆಗೆಯುವುದು ಹಾಗೂ ತಕ್ಷಣವೇ ಸಮೀಪದ ಆಸ್ಪತ್ರೆಗೆ ಸಾಗಿಸುವುದು ಅತ್ಯಂತ ಮುಖ್ಯ ಕ್ರಮಗಳಾಗಿವೆ ಎಂದು ವಿವರಿಸಿದರು.ಅಲ್ಲದೆ, ಹಾವು ಕಚ್ಚಿದ ಸ್ಥಳವನ್ನು ಕತ್ತರಿಸುವುದು, ವಿಷವನ್ನು ಹೀರುವ ಪ್ರಯತ್ನ ಮಾಡುವುದು, ಬಿಗಿಯಾಗಿ ಕಟ್ಟು ಹಾಕುವುದು ಅಥ–ವಾ ಯಾವುದೇ ರೀತಿಯ ಮೂಢನಂಬಿಕೆ ಚಿಕಿತ್ಸೆಯನ್ನು ಅನುಸರಿಸುವುದು ಅಪಾಯಕಾ–ರಿಯಾಗಿದೆ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು. ಸಮಯಕ್ಕೆ ಸರಿಯಾಗಿ ವೈದ್ಯಕೀಯ ಚಿಕಿತ್ಸೆ ದೊರೆತರೆ ಜೀವ ಉಳಿಸಬಹುದಾಗಿದೆ ಎಂಬ ಮಹತ್ವದ ಸಂದೇಶವನ್ನು ನೀಡಿದರು.

ಇದೇ ವೇಳೆ ಅವರು ನರ್ಸಿಂಗ್








ವೃತ್ತಿಯ ಮಹತ್ವದ ಕುರಿತು ಮಾತನಾಡಿ, ನರ್ಸ್‌ಗಳು ಆರೋಗ್ಯ ಕ್ಷೇತ್ರದ ಬೆನ್ನೆಲುಬಾಗಿದ್ದು, ರೋಗಿಗಳ ಆರೈಕೆಯಲ್ಲಿ ಅವರ ಪಾತ್ರ ಅತ್ಯಂತ ಅಮೂಲ್ಯವಾಗಿದೆ ಎಂದು ಹೇಳಿದರು. ನರ್ಸಿಂಗ್ ವಿದ್ಯಾರ್ಥಿಗಳು ಕೇವಲ ಪಠ್ಯ ಜ್ಞಾನಕ್ಕೆ ಸೀಮಿತವಾಗದೆ ಮಾನವೀಯ ಮೌಲ್ಯಗಳು, ಸೇವಾ ಮನೋಭಾವ ಹಾಗೂ ವೃತ್ತಿಪರ ನೈತಿ–ಕತೆಯನ್ನು ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.ಆರೋಗ್ಯ ಕ್ಷೇತ್ರದಲ್ಲಿ ಉತ್ತಮ ಭವಿಷ್ಯ ನಿರ್ಮಿಸಿಕೊಳ್ಳಲು ವಿದ್ಯಾರ್ಥಿಗಳು ಆತ್ಮವಿಶ್ವಾಸ, ಶಿಸ್ತು ಮತ್ತು ನಿರಂತರ ಅಧ್ಯಯನವನ್ನು ರೂಢಿಸಿಕೊಳ್ಳಬೇಕು ಎಂದು ಪ್ರೇರಣಾದಾಯಕ ಮಾತುಗಳ ಮೂಲಕ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ತುಂಬಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಸ್ಥೆಯ ಕಾರ್ಯದರ್ಶಿಗಳಾದ ಇರ್ಷಾದ್ ಕೆ ಅವರು, ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಜ್ಞಾನವನ್ನು ನೀಡುವ ಉದ್ದೇಶದಿಂದ ಪ್ರತೀ ಶನಿವಾರ ವಿವಿಧ ಕ್ಷೇತ್ರಗಳ ಪರಿಣಿತರನ್ನು ಆಹ್ವಾನಿಸಿ ವಿಶೇಷ ಉಪನ್ಯಾಸಗಳನ್ನು ಆಯೋಜಿಸಲಾಗುತ್ತಿದೆ ಎಂದು ತಿಳಿಸಿದರು. ಇಂದಿನ ಉಪನ್ಯಾಸವು ವಿದ್ಯಾರ್ಥಿಗಳಲ್ಲಿ ಆರೋಗ್ಯ ಜಾಗೃತಿ ಹಾಗೂ ತುರ್ತು ಪರಿಸ್ಥಿತಿಗಳನ್ನು ನಿಭಾಯಿಸುವ ಸಾಮರ್ಥ್ಯವನ್ನು ಹೆಚ್ಚಿಸಲು ಬಹಳ ಉಪಯುಕ್ತವಾಗಿದೆ ಎಂದು ಹೇಳಿದರು. ಹಾವು ಕಚ್ಚಿದಾಗ ಪ್ರಥಮ ಚಿಕಿತ್ಸೆಯ ಕು–ರಿತು ಅತ್ಯಂತ ಪರಿಣಾಮಕಾರಿಯಾಗಿ ಮತ್ತು ಮಾಹಿತಿಪೂರ್ಣವಾಗಿ ಉಪನ್ಯಾಸ ನೀಡಿದ ಫಾತಿಮಾ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯ ಮಕ್ಕಳ ತಜ್ಞರಾದ ಡಾ. ಫರ್ಹತ್ ತಬಸ್ಸುಮ್ ಮೇಡಂ ಅವರಿಗೆ ಸಂಸ್ಥೆಯ ಪರವಾಗಿ ಹೃತ್ಪೂರ್ವಕ ಕೃತಜ್ಞತೆಗಳನ್ನು ಸಲ್ಲಿಸಿದರು.

ಸಂಸ್ಥೆಯ ಅಧ್ಯಕ್ಷರಾದ ಇರ್ಫಾನ್ ಕೆ, ಕಾರ್ಯದರ್ಶಿಗಳಾದ ಇರ್ಷಾದ್ ಕೆ, ಎಲ್ಲಾ ವಿಭಾಗಗಳ ಪ್ರಾಚಾರ್ಯರು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳ ಪರವಾಗಿ ವಿಶೇಷ ಧನ್ಯವಾದಗಳನ್ನು ಅರ್ಪಿಸಿದರು.ಕಾರ್ಯಕ್ರಮದಲ್ಲಿ ವಿವಿಧ ವಿಭಾಗಗಳ ಪ್ರಾಚಾರ್ಯರು, ಉಪನ್ಯಾಸಕರು, ಸಿಬ್ಬಂದಿ ವರ್ಗ ಹಾಗೂ ನರ್ಸಿಂಗ್, ಡಿ ಫಾರ್ಮಸಿ ಮತ್ತು ಪ್ಯಾರಾಮೆಡಿಕಲ್ ವಿದ್ಯಾರ್ಥಿಗಳು ಉಪಸ್ಥಿತರಿದ್ದು, ಉಪನ್ಯಾಸದ ಪ್ರಯೋಜನವನ್ನು ಪಡೆದುಕೊಂಡರು. ಕಾರ್ಯಕ್ರಮವು ವಿದ್ಯಾರ್ಥಿಗಳ ಮೆಚ್ಚುಗೆಗೆ ಪಾತ್ರವಾಗಿ ಯಶಸ್ವಿಯಾಗಿ ಸಂಪನ್ನಗೊಂಡಿತು.

## ಸಿಂಧನೂರಿನಲ್ಲಿ ರೈತರ ಪರವಾಗಿ ರಸಗೊಬ್ಬರ ವಿತರಣೆ, ಎಫ್‌ಐಡಿ ರದ್ದು ಹಾಗೂ ಸ್ವಾಮಿನಾಥನ್ ವರದಿ ಜಾರಿಗೆ ಆಗ್ರಹ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ರೈತರಿಗೆ ಕೃಷಿಗೆ ಅಗತ್ಯವಿರುವಷ್ಟು ರಸಗೊಬ್ಬರವನ್ನು ಯಾವುದೇ ಷರತ್ತುಗಳಿಲ್ಲದೆ ವಿತರಣೆ ಮಾಡಬೇಕು. ಸರ್ಕಾರಕ್ಕೆ ಅದು ಸಾಧ್ಯವಾಗದಿದ್ದರೆ ರೈತರನ್ನು ದುಬಾರಿ ಹೈಬ್ರಿಡ್ ಬೀಜಗಳು, ರಾಸಾಯನಿಕ ಗೊಬ್ಬರಗಳು, ಕಳೆನಾಶಕಗಳು ಹಾಗೂ ಕ್ರಿಮಿನಾಶಕಗಳ ಅವಲಂಬನೆಗೆ ತಳ್ಳುವ ನೀತಿಗಳನ್ನು ಮರುಪರಿಶೀಲಿಸಿ, ಅವುಗಳ ವಿತರಣೆಯನ್ನು ಸಂಪೂರ್ಣ ನಿಲ್ಲಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ನೇತೃತ್ವದಲ್ಲಿ ರೈತ ಮುಖಂಡರು ಆಗ್ರಹಿಸಿದರು.**

ಈ ಕುರಿತು ಮನವಿ ಸಲ್ಲಿಸಿ ಮಾತನಾಡಿದ ಮುಖಂಡರು, ರಸಗೊಬ್ಬರ, ಬೀಜ ಮತ್ತು ಕ್ರಿಮಿನಾಶಕ ಔಷಧಿಗಳ ಮಾರಾಟಗಾರರು ಕೃತಕ ಅಭಾವ ಸೃಷ್ಟಿಸಿ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿರುವುದು ರೈತರ ಮೇಲಿನ ದೊಡ್ಡ ಅನ್ಯಾಯವಾಗಿದೆ ಎಂದು ಆರೋಪಿಸಿದರು. ಕಳಪೆ ಗುಣಮಟ್ಟದ ಬೀಜ, ಗೊಬ್ಬರ ಮತ್ತು ಔಷಧಿಗಳಿಂದ ಪ್ರತಿವರ್ಷ ಸಾವಿರಾರು ರೈತರು ಬೆಳೆ ನಷ್ಟ ಅನುಭವಿಸುತ್ತಿದ್ದಾರೆ ಎಂದು ಹೇಳಿದರು. ಅತಿವೃಷ್ಟಿ, ಅನಾವೃಷ್ಟಿ, ಕೀಟಬಾಧೆ ಮತ್ತು ಹವಾಮಾನ ವೈಪರೀತ್ಯಗಳ ನಡುವೆಯೂ ರೈತರು ಬೆಳೆ ಬೆಳೆದರೂ,




ಉತ್ಪನ್ನಗಳಿಗೆ ವೈಜ್ಞಾನಿಕ ಕನಿಷ್ಠ ಬೆಂಬಲ ಬೆಲೆ ಸಿಗದ ಕಾರಣ ಕೃಷಿಗೆ ಹಾಕಿದ ಬಂಡವಾಳವೂ ವಾಪಸ್ ಬರುವುದಿಲ್ಲ.

ಇದರಿಂದ ದೇಶದಲ್ಲಿ ರೈತರ ಆತ್ಮಹತ್ಯೆಗಳು ಹೆಚ್ಚುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದರು. 1960ರ ದಶಕದ ಮೊದಲು ರೈತರು ಸ್ಥಳೀಯ ಬೀಜಗಳು, ಸಾವಯವ ಗೊಬ್ಬರ ಮತ್ತು ಸಾಂಪ್ರದಾಯಿಕ ಕೃಷಿ ಪದ್ಧತಿಗಳ ಮೂಲಕ ಕಡಿಮೆ ವೆಚ್ಚದಲ್ಲಿ ಕೃಷಿ ನಡೆಸುತ್ತಿದ್ದರು. ನಂತರ ಹಸಿರು ಕ್ರಾಂತಿಯ ಭಾಗವಾಗಿ ಹೈಬ್ರಿಡ್ ಬೀಜಗಳು, ರಾಸಾಯನಿಕ ಗೊಬ್ಬರಗಳು ಮತ್ತು ಯಾಂತ್ರೀಕರಣದ ಬಳಕೆ ಹೆಚ್ಚಾದರೂ, ಇಂದು ರೈತರು ಸಾಲದ ಸುಳಿಯಲ್ಲಿ ಸಿಲುಕಿರುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು. ರೈತರ ಹಿತದೃಷ್ಟಿಯಿಂದ ಕೆ–ಕಿಸಾನ್ ತಂತ್ರಾಂಶದ ಎಫ್‌ಐಡಿ (FID) ವ್ಯವಸ್ಥೆಯನ್ನು ರದ್ದುಪಡಿಸಿ, ಷರತ್ತು ರಹಿತವಾಗಿ ರಸಗೊಬ್ಬರ ವಿತರಣೆ ಮಾಡಬೇಕು ಎಂದು ಆಗ್ರಹಿಸಿದರು.

ಪ್ರಮುಖ ಬೇಡಿಕೆಗಳು

ರೈತರು ರಸಗೊಬ್ಬರ ಖರೀದಿಸುವ ಸಂದರ್ಭದಲ್ಲಿ ಕೆ–ಕಿಸಾನ್ ತಂತ್ರಾಂಶದ ಎಫ್.ಐ.ಡಿ ಮೂಲಕ ಖರೀದಿಸಬೇಕೆನ್ನುವ ನಿರ್ಧಾರ ಹಿಂಪಡೆದುಕೊಳ್ಳಬೇಕು, ಹಾಗೂ ಕೃಷಿಯೇತರ ಚಟುವಟಿಕೆಗೆ ಬಳಕೆಯಾಗುತ್ತದೆ ಎನ್ನುವುದಾದರೆ ಕೃಷಿ ಇಲಾಖೆಯ ಜಿಲ್ಲಾ ಸಮಿತಿ ತಂಡವು ನಿಗಾವಹಿಸಬೇಕು.

2)ರಸಗೊಬ್ಬರ ಅಂಗಡಿಗಳ ಮಾಲೀಕರು ಗೋದಾಮಗಳಲ್ಲಿ ಕೂಡಿಟ್ಟುಕೊಂಡು ಕೃತಕ ಅಭಾವ ಸೃಷ್ಟಿಸಿ ಹೆಚ್ಚಿನ ದರಕ್ಕೆ ಮಾರಾಟ ಮಾಡುವುದಲ್ಲದೇ, ಕಳಪೆ ಗುಣಮಟ್ಟದ ರಸಗೊಬ್ಬರ ಹಾಗೂ ಕ್ರಿಮಿನಾಶಕ ಔಷಧಿಗಳನ್ನು ಲಿಂಕ್ ಮಾಡಿ ಕೊಡುವುದನ್ನು ತಡೆಹಿಡಿಯಬೇಕು.

3) ರೈತರ ಕೃಷಿ ಉತ್ಪನ್ನಗಳಿಗೆ ಯೋಗ್ಯವಾದ ಬೆಂಬಲಬೆಲೆ ಸಿಗದ ಕಾರಣ ಪ್ರತಿ ವರ್ಷ ರೈತರ ಆತ್ಮಹತ್ಯೆ ಪ್ರಕರಣಗಳು ಜಾಸ್ತಿಯಾಗುತ್ತಿವೆ. ಆ ಕಾರಣಕ್ಕಾಗಿ ರೈತರ ಆತ್ಮಹತ್ಯೆ ತಡೆಯಲು ಡಾ. ಎಮ್ ಎಸ್ ಸ್ವಾಮಿನಾಥನ್ ಆಯೋಗದ ವರದಿಯನ್ನು ಜಾರಿಗೊಳಿಸಿ ಆ ವರದಿ ಪ್ರಕಾರ ಯೋಗ್ಯ ಬೆಲೆಯನ್ನು ನಿಗದಿಗೊಳಿಸಿ ಕಡಿಮೆ ದರಕ್ಕೆ ಮಾರುಕಟ್ಟೆಯಲ್ಲಿ ಖರೀದಿಸದಂತೆ.

ವರ್ತಕರಿಗೆ ಕಟ್ಟುನಿಟ್ಟಿನ ಕಾನೂನು ಜಾ–ರಿಗೊಳಿಸುವಂತೆ ಅಥವಾ ಮಾರುಕಟ್ಟೆಯಲ್ಲಿ ಕಡಿಮೆ ದರಕ್ಕೆ ಮಾರಾಟವಾಗುವ ಎಲ್ಲಾ ಉತ್ಪನ್ನಗಳನ್ನು ಖರೀದಿಸಲು ಖರೀದಿ ಕೇಂದ್ರವನ್ನು ನಿರಂತರ (24x7) ವರ್ಷಪೂರ್ತಿ ಚಾಲ್ತಿಯಲ್ಲಿಟ್ಟು ಖರೀದಿಸಿ ಅಂದೇ ರೈತರ ಖಾತೆಗೆ ಹಣ ಪಾವತಿ ಮಾಡಬೇಕು.

4) ಕೃಷಿ ಇಲಾಖೆಯಲ್ಲಿ ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಬೇಕು ಮತ್ತು ರಾಯಚೂರು ಜಿಲ್ಲೆಯಲ್ಲಿ ನೂತನ ತಾಲೂಕಗಳಾಗಿ ಹಲವು ವರ್ಷಗಳು ಕಳೆದಿವೆ. ಅಂತ ತಾಲೂಕುಗಳಲ್ಲಿ ಸಹಾಯಕ ಕೃಷಿ ನಿರ್ದೇಶಕರ ಕಾರ್ಯಾಲಯ ಮತ್ತು ತಾಲೂಕು ಅಧಿಕಾರಿಗಳು ಇರುವುದಿಲ್ಲ. ಆ ಕಾರಣ–ಕ್ಕಾಗಿ ಸೂಕ್ತಕ್ರಮ ಕೈಗೊಂಡು ಇಲಾಖೆ ಮತ್ತು ಅಧಿಕಾ–ರಿಗಳು ಕಾರ್ಯನಿರ್ವಹಿಸುವಂತೆ ಮಾಡಬೇಕು.

5) ರಸಗೊಬ್ಬರ, ಕ್ರಿಮಿನಾಶಕಗಳ ಅಂಗಡಿಗಳ ಮುಂದೆ ದಾಸ್ತಾನು ಸಂಗ್ರಹ, ದರ ಹಾಗೂ ಕಂಪನಿಗಳ ವಿವರವನ್ನು ಪ್ರತಿನಿತ್ಯ ನಮೂದಿಸಬೇಕು.ಈ ಸಂದರ್ಭದಲ್ಲಿ ಶರಣಪ್ಪ ಮರಳಿ ಸುಲ್ತಾನಪುರ, ರಾಮಯ್ಯ ಜವಳಗೇರಾ, ಲಾಲಸಾಬ ನಾಡಗೌಡ, ವೆಂಕಟೇಶ ರತ್ನಾಪುರಹಟ್ಟಿ, ವೆಂಕಟೇಶ ಸಂತೆಕೆಲ್ಲೂರು, ಮಾನಯ್ಯ ಅಂಕುಶದೊಡ್ಡಿ, ನಾಗಪ್ಪ ಬೂದಿಹಾಳ, ಪರಯ್ಯಸ್ವಾಮಿ ಸಿಂಧನೂರು, ಧರ್ಮಣ್ಣ ಬನ್ನಿಗೋಳ, ಕೊಠಾರಿ ಜಯರಾಘವೇಂದ್ರ, ಮೌನೇಶ ಕನ್ನಾರಿ, ಬಸಪ್ಪ ಅಮರಾಪುರ ಸೇರಿದಂತೆ ರೈತ ಸಂಘದ ವಿವಿಧ ಪದಾಧಿಕಾರಿಗಳು ಮತ್ತು ಮುಖಂಡರು ಉಪಸ್ಥಿತರಿದ್ದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101 KARNATAKA, EDITOR BY: IRFAN K PH NO.